ನಮ್ಮಜನ ಪತ್ರಿಕೆ ಓದುಗರಿಗೆ ಹಾಗೂ ಜಾಹೀರಾತುದಾರರಿಗೆ, ಪತ್ರಿಕೆ ಹಂಚಿಕೆದಾರರಿಗೆ ಬೆಳಕಿನ ಹಬ್ಬವಾದ ದೀಪಾವಳಿ ಶುಭಾಶಯಗಳು.

# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 31 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 31–10–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 02 Issue - 31 | RNI No: KARKAN/2023/88462 | Chitradurga | Date: 31-10-2024 Thursday | Page: 4 | Price: Rs. 2-00

ಒಳಪುಟದ ಸುದ್ದಿಗಳು
ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ದೀಪಾವಳಿ ಸಾಮಾಗ್ರಿ ಮಾರಾಟ 2
ಡಿ.14 ರಂದು ಲೋಕಾದಲತ್: 3939 ಪ್ರಕಣಗಳ ಇತ್ಯರ್ಥಕ್ಕೆ ಗುರಿ 3
ರಾಷ್ಟ್ರದ ಏಳಿಗೆಗಾಗಿ ಸಮಗ್ರತೆಯ ಸಂಸ್ಕೃತಿ ಅಂಗ ವೈಕಲ್ಯತೆ ಪಾಪವಲ್ಲ: ಮ.ಕರೆಣ್ಣವರ 4

ಸುದ್ದಿ, ಜಾಹಿರಾತಿಗೆ 9686622252

## ಫಾಸ್ಟ್ ನ್ಯೂಸ್

### ಉಚಿತ ಡಯಾಲಿಸ್ ಸೇವೆ



» ಚಿತ್ರದುರ್ಗ

ಪ್ರಧಾನ ಮಂತ್ರಿ ರಾಷ್ಟ್ರೀಯ ಡಯಾಲಿಸಿಸ್ ಕಾರ್ಯಕ್ರಮದಡಿಯಲ್ಲಿ ನೆಫ್ರೋಪ್ಲಸ್ ಸಂಸ್ಥೆಯ ಸಹಯೋಗದೊಂದಿಗೆ ಚಿತ್ರದುರ್ಗ ಜಿಲ್ಲಾ ಆಸ್ಪತ್ರೆ ಹಾಗೂ ಚಳ್ಳಕೆರೆ, ಹಿರಿಯೂರು, ಮೊಳಕಾಲ್ಮೂರು, ಹೊಳಲ್ಕೆರೆ ಹಾಗೂ ಹೊಸದುರ್ಗ ತಾಲ್ಲೂಕಿನ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಕಿಡ್ನಿ ವೈಫಲ್ಯದಿಂದ ಬಳಲುತ್ತಿರುವ ರೋಗಿಗಳಿಗೆ ಉಚಿತ ಡಯಾಲಿಸಿಸ್ ಸೇವೆ ನೀಡುತ್ತಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕೆ.ಶಿವಕುಮಾರ್ ಅವರ ಮೊಬೈಲ್ ಸಂಖ್ಯೆ 7760924885, ಎಂ.ಹೆಚ್. ಮಂಜುನಾಥ್ ಮೊಬೈಲ್ ಸಂಖ್ಯೆ 9738485783ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಸರ್ವೇಕ್ಷಣಾ ಘಟಕದ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕೈಮಗ್ಗ ಮತ್ತು ವಿದ್ಯುತ್ ಮಗ್ಗ ನೇಕಾರರಿಂದ ಅರ್ಜಿ ಆಹ್ವಾನ

» ಚಿತ್ರದುರ್ಗ

ಕೈಮಗ್ಗ ಮತ್ತು ಜವಳಿ ಇಲಾಖೆಯು ಕೈಮಗ್ಗ ಮತ್ತು ವಿದ್ಯುತ್ ಮಗ್ಗ ನೇಕಾರರುಗಳಿಗೆ ಹಾಗೂ ಕೈಮಗ್ಗ ನೇಕಾರರಿಗೆ ಸಂಬಂಧಿಸಿದ ಇತರೆ ಚಟುವಟಿಕೆಗಳಲ್ಲಿ ತೊಡಗಿರುವ ನೇಕಾರರಿಗೆ ವಾರ್ಷಿಕರೂ.5000/–ಗಳನ್ನುನೀಡಲುನೇಕಾರರ ಸಮ್ಮಾನ್ ಯೋಜನೆಯಡಿ 2024–25ನೇ ಸಾಲಿಗೆ ಈಗಾಗಲೇ ನೊಂದಾಯಿತವಾಗಿರುವ ಅರ್ಹ ಕೈಮಗ್ಗ, ವಿದ್ಯುತ್ ಮಗ್ಗ ನೇಕಾರರಿಂದ ಹೊಸದಾಗಿ ಅರ್ಜಿ ಪಡೆದು ಅರ್ಹವಿರುವ ನೇಕಾರರ ಅರ್ಜಿಗಳನ್ನು ಸೇವಾ ಸಿಂಧು ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಲು ಕೇಂದ್ರ ಕಚೇರಿ ಪತ್ರದಲ್ಲಿ ಸೂಚಿಸಲಾಗಿದೆ. ಅದರಂತೆ 2023–24ನೇ ಸಾಲಿನಲ್ಲಿ ಈ ಯೋಜನೆಯಡಿ ಈಗಾಗಲೇ ಸೌಲಭ್ಯ ಪಡೆದಿರುವ ಕೈಮಗ್ಗ ಮತ್ತು ವಿದ್ಯುತ್ ಮಗ್ಗ ನೇಕಾರರ ಪಟ್ಟಿಯಲ್ಲಿ ನೊಂದಾಯಿತ ಕೈಮಗ್ಗ ನೇಯ್ಗೆ, ವಿದ್ಯುತ್ ಮಗ್ಗ ನೇಯ್ಗೆ ಚಟುವಟಿಕೆಯಲ್ಲಿ ತೊಡಗಿರುವ ಅರ್ಹ ನೇಕಾರರಿಂದ, 2024ರ ಅ.20ರೊಳಗಾಗಿ ಅರ್ಜಿ ಸಲ್ಲಿಸುವಂತೆ ಪತ್ರಿಕಾ ಪ್ರಕಟಣೆ ಹೊಡಿಸಲಾಗಿತ್ತು. ಇನ್ನೂ ಹಲವಾರು ನೇಕಾರರು ಅರ್ಜಿ ಸಲ್ಲಿಸದೇ ಇರುವುದರಿಂದ ಅರ್ಜಿ ಸಲ್ಲಿಸಲು ಇನ್ನೂ ಕಾಲಾವಕಾಶ ಅವಶ್ಯಕತೆ ಇರುವುದನ್ನು ಮನಗಂಡು ಅರ್ಜಿ ಸಲ್ಲಿಕೆ ಅವಧಿಯನ್ನು 2024ರ ನ.10ರೊಳಗಾಗಿ ಅರ್ಜಿ ಸಲ್ಲಿಸಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರ ಕಚೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ, ಬಿ.ಡಿ.ರಸ್ತೆ, ಯುನಿಯನ್ ಪಾರ್ಕ್ ಹತ್ತಿರ, ಮಸೀದಿ ಪಕ್ಕ, ಚಿತ್ರದುರ್ಗ ಕಚೇರಿ ದೂರವಾಣಿ ಸಂಖ್ಯೆ 08194–221426ಗೆ ಸಂಪರ್ಕಿಸಬಹುದು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವ್ಯಕ್ತಿ ಕಾಣೆ: ಪತ್ತೆಗೆ ಮನವಿ

» ಚಿತ್ರದುರ್ಗ

ಜಿಲ್ಲೆಯ ಹೊಳಲ್ಕೆರೆ ತಾಲ್ಲೂಕಿನ ಶಿವಗಂಗಾ ಗ್ರಾಮದ ಜಗದೀಶ ತಂದೆ ಮರುಳಸಿದ್ದಪ್ಪ (ಸು.27ವರ್ಷ) ಎಂಬ ವ್ಯಕ್ತಿ ಕಾಣೆಯಾದ ಕುರಿತು 2024ರ ಅ.22ರಂದು ಹೊಳಲ್ಕೆರೆ ತಾಲ್ಲೂಕು ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ಜಗದೀಶ್ ಸು.5.5 ಅಡಿ ಎತ್ತರ, ದುಂಡು ಮುಖ, ಎಣ್ಣೆಗೆಂಪು ಬಣ್ಣ, ದೃಢವಾದ ಮೈಕಟ್ಟು ಹೊಂದಿದ್ದು, ಕನ್ನಡ ಭಾಷೆ ಮಾತನಾಡುವರು. ಮನೆಯಿಂದ ಹೋಗುವಾಗ ನೀಲಿ ಬಣ್ಣದ ಜೀನ್ಸ್ ಪ್ಯಾಂಟ್, ಹಸಿರು ಬಣ್ಣದ ಟೀ ಶರ್ಟ್ ಧರಿಸಿರುತ್ತಾರೆ. ಬಲಗೈ ಮುಂಗೈ ಮೇಲೆ ಹಚ್ಚೆ ಗುರುತು ಇರುತ್ತದೆ. ಮೇಲ್ಕಂಡ ವ್ಯಕ್ತಿಯ ಕುರಿತು ಮಾಹಿತಿ ಕಂಡು ಬಂದಲ್ಲಿ ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ 9480803165, ಹೊಳಲ್ಕೆರೆ ವೃತ್ತ ನಿರೀಕ್ಷಕರ ಕಚೇರಿ ದೂರವಾಣಿ ಸಂಖ್ಯೆ 08191–275376, 9480803135 ಗೆ ಸಂಪರ್ಕಿಸುವಂತೆ ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ತಿಳಿಸಿದ್ದಾರೆ.

ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್ ಅಭಿಮತ

# ತಂತ್ರಜ್ಞಾನ ಬಳಕೆಯಿಂದ ಭ್ರಷ್ಟಾಚಾರಕ್ಕೆ ಕಡಿವಾಣ

» ಚಿತ್ರದುರ್ಗ

ತಂತ್ರಜ್ಞಾನದ ಪರಿಣಾಮಕಾರಿ ಬಳಕೆಯಿಂದ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಬಹುದು. ಜೊತೆಗೆ ಉತ್ತಮ ಆಡಳಿತ ನೀಡಲು ತಂತ್ರಜ್ಞಾನ ಸಹಕಾರಿಯಾಗಿದೆ ಎಂದು ಜಿಲ್ಲಾ ಪಂಚಾಯಿತಿ ಸಿಇಓ ಎಸ್.ಜೆ.ಸೋಮಶೇಖರ್ ಅಭಿಪ್ರಾಯಪಟ್ಟರು.





ಕರ್ನಾಟಕ ಲೋಕಾಯುಕ್ತ, ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯಿತಿ ಸಹಯೋಗದಲ್ಲಿ, ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ಆಯೋಜಿಸಲಾದ ಭ್ರಷ್ಟಾಚಾರದ ವಿರುದ್ಧ ಜಾಗೃತಿ ಅರಿವು ಸಪ್ತಾಹ–2024 ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಭ್ರಷ್ಟಾಚಾರದ ಪರಿಣಾಮವಾಗಿ ಸರ್ಕಾರಿ ಯೋಜನೆಗಳ ಜಾರಿಯಲ್ಲಿ ವಿಳಂಬವಗುತ್ತದೆ. ಫಲಾನುಭವಿಗಳಿಗೆ ಯೋಜನೆಗಳ ಲಾಭ ದೊರೆಯುವುದಿಲ್ಲ. ಇದನ್ನು ತಪ್ಪಿಸುವ ಸಲುವಾಗಿ ಸಕಾಲ ಹಾಗೂ ಇ–ಆಫೀಸ್ ತಂತ್ರಜ್ಞಾನವನ್ನು ಆಡಳಿತದಲ್ಲಿ ಅಳವಡಿಸಲಾಗಿದೆ. ಇದರಿಂದ ಸಾರ್ವಜನಿಕರ ಕೆಲಸದಲ್ಲಿ ವಿನಾಕಾರಣ ಉಂಟಾಗುವ ವಿಳಂಬ ತಪ್ಪುತ್ತದೆ. ಅಧಿಕಾರಿಗಳ ಸಹ ತಮ್ಮ ಅಧೀನದಲ್ಲಿರುವ ಕಚೇರಿಗಳಲ್ಲಿ ಕಡತಗಳನ್ನು ಇ–ಆಫೀಸ್ ಮೂಲಕವೇ ವಿಲೇವಾರಿ ಮಾಡಬೇಕು ಎಂದರು.ಪರಿಣಾಮಕಾರಿ ಆಡಳಿತದ ದೃಷ್ಟಿ ಒಂದೇ ವಿಭಾಗದಲ್ಲಿ ಬಹು ವರ್ಷಗಳಿಂದ ಕೆಲಸ ಮಾಡುವ ಸಿಬ್ಬಂದಿಯನ್ನು ಬೇರೆ ವಿಭಾಗಕ್ಕೆ ನಿಯೋಜಿಸಬೇಕು. ಇದರಿಂದ ಭ್ರಷ್ಟಾಚಾರ ಮಾಡಲು ಆಸ್ಪದ ಉಂಟಾಗವುದಿಲ್ಲ. ಇದೇ ರೀತಿ ಉನ್ನತ ಅಧಿಕಾರಿಗಳು ಸಹ ಭ್ರಷ್ಟಚಾರದಲ್ಲಿ ತೊಡಗದಂತೆ ತಡೆಯಲು ಸರ್ಕಾರ ಸಹ ನಿಯಮತವಾಗಿ ಅಧಿಕಾರಿಗಳನ್ನು ವರ್ಗಾವಣೆ ಮಾಡುತ್ತದೆ ಎಂದು ಹೇಳಿದರು.

ಸರ್ಕಾರದ ಎಲ್ಲಾ ಅಭಿವೃದ್ಧಿ ಯೋಜನೆಗಳನ್ನು ಜಾರಿ ಮಾಡುವಾಗ ಹಣದ ವಹಿವಾಟು ಇರುತ್ತದೆ. ಇದನ್ನು ನಿರ್ವಹಣೆ ಮಾಡುವ ಹೊಣೆ ಸರ್ಕಾರಿ ಅಧಿಕಾರಿ ಹಾಗೂ ನೌಕರರರದು. ನಿಯಮಗಳಿಗೆ ಬದ್ದವಾಗಿಯೇ ಯೋಜನೆಗಳನ್ನು ಜಾರಿ ಮಾಡಬೇಕು. ಇಂತಹ ಸಂದರ್ಭದಲ್ಲಿ ಸರ್ಕಾರಿ ಅಧಿಕಾರಿ ಹಾಗೂ ನೌಕರರು ತನ್ನ ಅಧಿಕಾರವನ್ನು ದುರ್ಬಳಕೆ ಮಾಡಿ ಭ್ರಷ್ಟಾಚಾರ ಎಸಗಿದರೆ ಅಂತಹವರ ವಿರುದ್ಧ ಕ್ರಮ ಕೈಗೊಳ್ಳಲು ರಾಜ್ಯದಲ್ಲಿ ಲೋಕಾಯುಕ್ತ ಸಂಸ್ಥೆ ಇದೆ ಎಂದರು.ಭ್ರಷ್ಟಾಚಾರ ಹಾಗೂ ಯೋಜನೆಗಳ ಜಾರಿಯಲ್ಲಿ ವಿಳಂಬ ಆಗುವುದನ್ನು ತಪ್ಪಿಸಲು ಲೋಕಾಯುಕ್ತ ಮುಂಜಾಗ್ರತವಾಗಿ ಕಣ್ಗಾವಲು ಇರಿಸುತ್ತದೆ. ಒಂದು ವೇಳೆ ಭ್ರಷ್ಟಾಚಾರದ ದೂರು ಕೇಳಿ ಬಂದರೆ, ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಪ್ರಕರಣ ದಾಖಲಿಸುತ್ತದೆ. ತಪ್ಪಿತಸ್ಥ ಅಧಿಕಾರಿ ಹಾಗೂ ನೌಕರರಿಗೆ ಭ್ರಷ್ಟಾಚಾರ ಪ್ರಕರಣದಲ್ಲಿ ಶಿಕ್ಷೆಯಾದರೆ, ಇದು ಇತರೆ ಅಧಿಕಾರಿ ಹಾಗೂ ನೌಕರರಿಗೂ ಎಚ್ಚರಿಕೆ ಎನಿಸುತ್ತದೆ ಎಂದು ಅಭಿಪ್ರಾಯಪಟ್ಟರು.

ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ, ಲೋಕಾಯುಕ್ತ ಕಾಯ್ದೆ ಹಾಗೂ ಸರ್ಕಾರಿ ನೌಕರರ ನಡವಳಿಕೆ ಹಾಗೂ ನಿಯಮಗಳ ಕುರಿತುನೌಕರರಲ್ಲಿಜಾಗೃತಿಮೂಡಿಸುಬೇಕು. ಜೊತೆಗೆ, ನೈತಿಕ ಮೌಲ್ಯಗಳನ್ನು ಸಹ ಅಳವಡಿಸಿಕೊಳ್ಳುವಂತೆ ನೌಕರರಿಗೆ ಪ್ರೇರೆಪಿಸಬೇಕು ಎಂದು ಹೇಳಿದರು. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಆಡಳಿತದಲ್ಲಿ ಪಾರ್ದರ್ಶಕತೆ ನೈತಿಕತೆ ಹಾಗೂ ಮಾನವೀಯ ಗುಣಗಳನ್ನು ಅಧಿಕಾರಿ ಹಾಗೂ ನೌಕರರು ಅಳವಡಿಸಿಕೊಳ್ಳಬೇಕು. ಸರ್ಕಾರ ಕಾಲ ಕಾಲಕ್ಕೆ ನೌಕರರಿಗೆ ವೇತನ ಆಯೋಗಗಳನ್ನು ನೀಡುವ ಮೂಲಕ ಸಾಕಷ್ಟು ಆರ್ಥಿಕ ಸೌಲಭ್ಯಗಳನ್ನುನೀಡಿದೆ. ಸಾರ್ವಜನಿಕರನ್ನು ಕಚೇರಿ ಅಲೆದಾಡಿಸದೇ ನಿಗದಿತ ಸಮಯದಲ್ಲಿ ಕೆಲಸ ಕಾರ್ಯಗಳನ್ನು ಮಾಡಬೇಕು ಎಂದರು.ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ ಮಾತನಾಡಿ ಶೇ.70 ರಷ್ಟು ಸರ್ಕಾರಿ ನೌಕರರು ಕಳವರ್ಗ ಹಾಗೂ ಬಡತನದಿಂದ ಬಂದವರು. ಇದನ್ನು ಮನದಲ್ಲಿ ಇಟ್ಟುಕೊಂಡು ರೈತರು ಹಾಗೂ ಸಾರ್ವಜನಿಕರ ಕೆಲಸ ಮಾಡಿಕೊಡಬೇಕು. ಕೆಲಸದಲ್ಲಿ ತೃಪ್ತಿ ಹೊಂದುವ ಜೊತೆಗೆ, ಮಾನವೀಯತೆ ಹಾಗೂ ಕರುಣೆಯಿಂದ ಸಾರ್ವಜನಿಕರ ಸೇವೆ ಮಾಡಬೇಕು ಎಂದರು.

ಉಪ ಅರಣ್ಯಸಂರಕ್ಷಕ ರಾಜಣ್ಣ ಮಾತನಾಡಿ, ಪ್ರಾಮಾಣಿಕವಾಗಿ ಹಾಗೂ ನಿಯಮಬದ್ದವಾಗಿ ಕರ್ತವ್ಯ ನಿರ್ವಹಿಸುವ ಅಧಿಕಾರಿ ಹಾಗೂ ನೌಕರರಿಗೆ ಲೋಕಾಯುಕ್ತದಿಂದ ಯಾವುದೇ ತೊಂದರೆಯಾಗುವುದಿಲ್ಲ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿ ಎನ್.ವಾಸುದೇವರಾಮ್, ಯಾವುದೇ ಪೂರ್ವಾಗ್ರಹ ಪೀಡಿತವಾಗಿ ಲೋಕಾಯುಕ್ತ ಸಂಸ್ಥೆ ಅಧಿಕಾರಿ ಹಾಗೂ ನೌಕರರ ವಿರುದ್ಧ ಕಾರ್ಯಾಚರಣೆ ನಡೆಸುವುದಿಲ್ಲ. ಆಪಾದನೆ ಕೇಳಿಬಂದ ಅಧಿಕಾರಿ ಹಾಗೂ ನೌಕರರ ಸಂಪೂರ್ಣ ವಿವರಗಳನ್ನು ಸಂಗ್ರಹಿಸುವುದರೊಂದಿಗೆ, ಅವರ ಮೇಲೆ ಬಹುದಿನಗಳ ಕಾಲ ನಿಗಾ ಇರಿಸಲಾಗುತ್ತದೆ. ಕೇಳಿದ ಬಂದ ಆಪಾದನೆ ನೂರಷ್ಟು ಸತ್ಯವಾಗಿದ್ದು, ಅಧಿಕಾರಿಗಳು ಲಂಚಕ್ಕೆ ಬೇಡಿಕೆ ಇಡುವುದು, ವಿಳಂಬ ಮಾಡಿರುವುದರ ಬಗ್ಗೆ ಸಾಕ್ಷ್ಯಾಧಾರಗಳು ಪೂರಕವಾಗಿದ್ದಾಗ ಮಾತ್ರವೇ ಪರಿಶೀಲನೆ ನಡೆಸಿ, ಲೋಕಾಯುಕ್ತ ಎ.ಡಿ.ಜಿ.ಪಿ ಅವರ ಅನುಮತಿಯ ಮೇರೆಗೆ ದಾಳಿ ನಡೆಸಲಾಗುತ್ತದೆ. ಇದರಲ್ಲಿ ಯಾವುದೇ ದುರುದ್ದೇಶ ಇರುವುದಿಲ್ಲ ಎಂದು ಸ್ಪಷ್ಟ ಪಡಿಸಿದರು.ಲೋಕಾಯುಕ್ತ ಉಪಾಧೀಕ್ಷಕ ಮೃತ್ಯುಂಜಯ ಭ್ರಷ್ಟಾಚಾರ ವಿರೋಧಿ ಪ್ರತಿಜ್ಞಾ ವಿಧಿ ಬೋಧಿಸುವುದರೊಂದಿಗೆ, ಭ್ರಷ್ಟಾಚಾರ ಪ್ರತಿಬಂಧಕ ಹಾಗೂ ಲೋಕಾಯುಕ್ತ ಕಾಯ್ದೆ ಕುರಿತು ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಎಲ್ಲಾ ಇಲಾಖೆಗಳ ಅಧಿಕಾರಿ ಹಾಗೂ ಸಿಬ್ಬಂದಿ ಭಾಗವಹಿಸಿದ್ದರು.

# ಕನ್ನಡರಥಕ್ಕೆ ಅದ್ದೂರಿಸ್ವಾಗತ: ಮಳೆಯಲ್ಲೂ ಭಾಗವಹಿಸಿದ ನೂರಾರು ಕನ್ನಡಾಭಿಮಾನಿಗಳು

» ಚಳ್ಳಕೆರೆ

ಅಖಿಲ ಭಾರತ ಕನ್ನಡಸಾಹಿತ್ಯ ಸಮ್ಮೇಳನ ಹಿನ್ನೆಲೆಯಲ್ಲಿ ಚಳ್ಳಕೆರೆ ನಗರಕ್ಕೆ ಆಗಮಿಸಿದ ಕನ್ನಡ ರಥವನ್ನು ಕನ್ನಡ ಸಾಹಿತ್ಯ ಪರಿಷತ್, ತಾಲ್ಲೂಕು ಮಟ್ಟದ ಅಧಿಕಾರಿಗಳ ತಂಡ, ವಿವಿಧಶಾಲೆಗಳ ಮಕ್ಕಳು ಹಾಗೂ ಅಧಿಕಾರಿಗಳು ಚಳ್ಳಕೆರೆಯಮ್ಮ ದೇವಸ್ಥಾನದ ಬಳಿ ಭವ್ಯವಾಗಿ ಸ್ವಾಗತಿಸಿದರು.



ಕನ್ನಡ ರಥ ಚಳ್ಳಕೆರೆಗೆ ಆಗಮಿಸಿದ ಸಂದರ್ಭದಲ್ಲಿ ಮಳೆಯ ನಡುವೆಯೂ ನೂರಾರು ಕನ್ನಡಾಭಿಮಾನಿಗಳು ಕನ್ನಡ ರಥಕ್ಕೆ ಹೂಮಾಲೆ ಹಾಕಿ, ಪೂಜೆ ಸಲ್ಲಿಸಿ ಸ್ವಾಗತಿಸಿದರು. ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ ರಥವನ್ನು ಸ್ವಾಗತಿಸಿ ಮಾತನಾಡಿ, ಡಿಸೆಂಬರ್ 20, 21, 22 ಮೂರು ದಿನಗಳ ಕಾಲ ಮಂಡ್ಯ ಜಿಲ್ಲೆಯಲ್ಲಿ 87ನೇ ಅಖಿಲ ಭಾರತ ಕನ್ನಡಸಾಹಿತ್ಯ ಸಮ್ಮೇಳನ ಅದ್ದೂರಿಯಾಗಿ ನಡೆಯಲಿದ್ದು, ಸಾಹಿತ್ಯ ಸಮ್ಮೇಳನವನ್ನು ಯಶಸ್ವಿಗೊಳಿಸುವ ಹಿನ್ನೆಲೆಯಲ್ಲಿ ಕನ್ನಡ ರಥಯಾತ್ರೆ ರಾಜ್ಯಾದ್ಯಂತ ಸಂಚರಿಸುತ್ತಿದ್ದು, ಮಂಡ್ಯದ ಸಮ್ಮೇಳನಕ್ಕೆ ಹೆಚ್ಚಿನ ಸಂಖ್ಯೆಯ ಜನರು ಭಾಗವಹಿಸುವಂತೆ ಮನವಿ ಮಾಡಿದರು. ನಿರಂತರ ಮಳೆಯಲ್ಲೂ ಕನ್ನಡರಥ ಬಳ್ಳಾರಿ ರಸ್ತೆ, ನೆಹರೂ ಸರ್ಕಲ್, ಅಂಬೇಡ್ಕರ್, ವಾಲ್ಮೀಕಿ ವೃತ್ತದ ಮೂಲಕ ಪ್ರವಾಸಿಮಂದಿರ ತಲುಪಿತು. ವಿವಿಧ ಕಲಾತಂಡಗಳು, ಶಾಲಾ ವಿದ್ಯಾರ್ಥಿಗಳು ಕನ್ನಡ ಬಾವುಟ ಹಿಡಿದು ಮೆರವಣಿಗೆಯಲ್ಲಿ ಸಾಗಿದರು. ಪೌರಾಯುಕ್ತ ಎಚ್.ಜಿ.ಜಗರೆಡ್ಡಿ, ತಾಲ್ಲೂಕು ಪಂಚಾಯಿತಿ ಸಹಾಯಕ ಕಾರ್ಯನಿರ್ವಹಣಾಧಿಕಾರಿ ಸಂತೋಷ್, ಕಂದಾಯಾಧಿಕಾರಿ ತಿಪ್ಪೇಸ್ವಾಮಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಂ.ಶಿವಸ್ವಾಮಿ, ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಕೆ.ಚಿತ್ತಯ್ಯ, ಎಂ.ಎನ್.ಮೃತ್ಯುಂಜಯ, ಕೆಂಚವೀರನಹಳ್ಳಿ ಮಲ್ಲೇಶ್, ಚನ್ನಬಸಪ್ಪ, ಈರಣ್ಣ, ಕೆ.ಎಸ್.ಶ್ರೀಕಾಂತ್, ಪಿ.ಮಂಜುನಾಥ, ಮುಂತಾದವರು ಉಪಸ್ಥಿತರಿದ್ದರು.

## ನ.1ರಂದು ಕನ್ನಡ ರಾಜ್ಯೋತ್ಸವ

» ಚಿತ್ರದುರ್ಗ

ಜಿಲ್ಲಾಡಳಿತದ ವತಿಯಿಂದ ನವೆಂಬರ್ 1ರಂದು ಬೆಳಿಗ್ಗೆ 9ಕ್ಕೆ ನಗರದ ಪೊಲೀಸ್ ಕವಾಯತು ಮೈದಾನದಲ್ಲಿ "ಕನ್ನಡ ರಾಜ್ಯೋತ್ಸವ" ಕಾರ್ಯಕ್ರಮ ಆಯೋಜಿಸಲಾಗಿದೆ. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರು ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ರಾಜ್ಯೋತ್ಸವದ ಸಂದೇಶ ನೀಡುವರು. ಸಂಸದ ಗೋವಿಂದ ಎಂ ಕಾರಜೋಳ ಘನ ಉಪಸ್ಥಿತಿ ವಹಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಅಧ್ಯಕ್ಷರು ಹಾಗೂ ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ, ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ, ಮೊಳಕಾಲ್ಮೂರು ಶಾಸಕ ಎನ್.ವೈ.ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ್, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರ್ ಭಾಷಾ, ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಆದಿಜಾಂಬವ ನಿಗಮದ ಅಧ್ಯಕ್ಷ ಜಿ.ಎಸ್. ಮಂಜುನಾಥ್, ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷೆ ಸವಿತಾ ರಘು, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಬಿ.ಎನ್.ಸುಮಿತ ರಾಘವೇಂದ್ರ ಹಾಗೂ ನಗರಸಭೆ ಸದಸ್ಯರು, ಚುನಾಯಿತ ಪ್ರತಿನಿಧಿಗಳು ಭಾಗವಹಿಸುವರು. ರಾಜ್ಯೋತ್ಸವದ ಅಂಗವಾಗಿ ಅಂದು ಬೆಳಿಗ್ಗೆ 7 ಗಂಟೆಗೆ ನಗರದ ನೀಲಕಂಠೇಶ್ವರ ದೇವಸ್ಥಾನದಿಂದ ಶ್ರೀ ಭುವನೇಶ್ವರಿ ಭಾವಚಿತ್ರ, ಕಲಾ ತಂಡಗಳು ಹಾಗೂ ಸ್ಥಬ್ದ ಚಿತ್ರಗಳೊಂದಿಗೆ ಪೊಲೀಸ್ ಕವಾಯತು ಮೈದಾನದವರೆಗೆ ಭವ್ಯ ಮೆರವಣಿಗೆ ಜರುಗಲಿದೆ. ಅದೇ ದಿನ ಸಂಜೆ 6 ಗಂಟೆಗೆ ನಗರದ ತ.ರಾ.ಸು ರಂಗಮಂದಿರದಲ್ಲಿ ಶಾಲಾ ಕಾಲೇಜು ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ.

## ಪ್ರಮುಖ ಸುದ್ದಿ

ದಲಿತ ಯುವಕನಿಗೆ ಕ್ಷೌರ ನಿರಾಕರಣೆ

# ಅಸ್ಪೃಶ್ಯತೆಗೆ ಅವಕಾಶ ನೀಡಿದರೆ ಕಠಿಣ ಕಾನೂನು ಕ್ರಮ: ಎಸ್ಪಿ

» ಚಳ್ಳಕೆರೆ

ದೇಶದ ಸುವರ್ಣ ಮಹೋತ್ಸವದ ಸ್ವಾತಂತ್ರ್ಯೋತ್ಸವ ಸಂದರ್ಭದಲ್ಲೂ ಅಸ್ಪೃಶ್ಯತೆ ಎಂಬುವುದು ಇನ್ನೂ ದಲಿತ ಸಮುದಾಯವನ್ನು ಕಾಡುತ್ತೀರುವುದು ವಿಷಾದ ಸಂಗತಿ.



ತಾಲ್ಲೂಕಿನ ತಳಕು ಪೊಲೀಸ್ ಠಾಣಾ ವ್ಯಾಪ್ತಿಯ ಕಾಲುವೇಹಳ್ಳಿ ಗ್ರಾಮದಲ್ಲಿ ಹರಿಜನ ಸಮುದಾಯಕ್ಕೆ ಸೇರಿದ ಜನರಿಗೆ ಕ್ಷೌರಮಾಡಲು ನಿರಾಕರಿಸಿದ ಪ್ರಕರಣ ವರದಿಯಾದ ಬೆನ್ನೆಲ್ಲೆ ಗ್ರಾಮಕ್ಕೆ ಭೇಟಿ ನೀಡಿದ ಜಿಲ್ಲಾ ರಕ್ಷಣಾಧಿಕಾರಿ ರಂಜಿತ್‌ಕುಮಾರ್ ಬಂಡಾರು, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಹೆಚ್ಚುವರಿ ರಕ್ಷಣಾಧಿಕಾರಿ ಕುಮಾರಸ್ವಾಮಿ ಗ್ರಾಮದಲ್ಲಿ ಸಭೆ ನಡೆಸಿ ಅಸ್ಪೃಶ್ಯತೆ, ಅಸಮಾನತೆಯನ್ನು ಹುಟ್ಟುಹಾಕುವ ಶಕ್ತಿಗಳಿಗೆ ಎಚ್ಚರಿಕೆ ನೀಡಿದಲ್ಲದೆ, ಕಾನೂನು ಕ್ರಮ ಕೈಗೊಂಡು ದಲಿತ ಸಮುದಾಯಕ್ಕೆ ನ್ಯಾಯವನ್ನು ದೊರಕಿಸಿಕೊಡುವ ಭರವಸೆ ನೀಡಿದ್ದಾರೆ.

ಗ್ರಾಮದಲ್ಲಿರುವ ಸುಮಾರು 40 ದಲಿತ ಕುಟುಂಬದವರು ಕಟಿಂಗ್ ಶಾಪ್‌ಗೆ ಹೋಗದ ಸ್ಥಿತಿ ಉಂಟಾಗಿದೆ. ಇದು ಕೆಲವು ವರ್ಷಗಳಿಂದ ಗೌಡರ ಸೂಚನೆಯಂತೆ ನಡೆಯುತ್ತಿರುವುದಾಗಿ ತಹಶೀಲ್ದಾರ್‌ಗೆ ನೀಡಿದ ನಮವಿಯಲ್ಲಿ ತಿಳಿಸಲಾಗಿದೆ. ನಾವು ಹೇಳಿದವರಿಗೆ ಮಾತ್ರ ಕಟಿಂಗ್ ಮಾಡಬೇಕೆಂಬ ಶರತ್ತು ಹಾಕಿದ್ದಾರೆ, ಇದರಿಂದ ಗ್ರಾಮದ ದಲಿತರು ಕಟಿಂಗ್ ಸೇವೆಯಿಂದ ವಂಚಿತರಾಗಿದ್ದಾರೆ. ಕೇವಲ ಮುಂದುವರೆದ ಜಾತಿಯವರಿಗೆ ಮಾತ್ರ ಕ್ಷೌರ ಮಾಡಬೇಕೆಂಬ ಇಲ್ಲಿನ ಗ್ರಾಮದ ಹಿರಿಯರ ಹೇಳಿಕೆಗೆ ಸವಿತಾಸಮಾಜದ ವ್ಯಕ್ತಿ ನಾಗರಾಜು ಬದ್ದನಾಗಿದ್ದಾನೆ. ಆತನು ಸಹ ಗ್ರಾಮದಜನರ ಮಾತು ಮೀರುವಂತಿಲ್ಲ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಪುಟ ↘ 2

## ಫಾಸ್ಟ್ ನ್ಯೂಸ್

### ಅಸ್ಪೃಶ್ಯತೆಗೆ ಅವಕಾಶ ನೀಡಿದರೆ ಕಠಿಣ ಕಾನೂನು ಕ್ರಮ: ಎಸ್ಪಿ

» ಮೊದಲ ಪುಟದಿಂದ

ತಹಶೀಲ್ದಾರ್ ರೇಹಾನ್‌ಪಾಷ ಈ ಬಗ್ಗೆ ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದ ಬೆನ್ನ ಹಿಂದೆ ಜಿಲ್ಲಾ ರಕ್ಷಣಾಧಿಕಾರಿ ಮತ್ತು ತಂಡ ಗ್ರಾಮದ ಎಲ್ಲಾ ಸಮುದಾಯದ ಮುಖಂಡರೊಂದಿಗೆ ಕೂಲಂಕುಷ ಚರ್ಚೆ ನಡೆಸಿದರಲ್ಲದೆ, ಯಾವುದೇ ಕಾರಣಕ್ಕೂ ಜಾತಿಯ ವಿಷಬೀಜ ಬಿತ್ತಿ ದಲಿತ ಸಮುದಾಯಕ್ಕೆ ಅನ್ಯಾಯ, ಅವಮಾನ ಮಾಡಿದರೆ ಸಹಿಸಲು ಸಾಧ್ಯವಿಲ್ಲ. ಅಂತಹವರ ವಿರುದ್ಧ ಕಠಿಣವಾದ ಕಾನೂನು ಕ್ರಮ ಕೈಗೊಳ್ಳುವ ಎಚ್ಚರಿಕೆ ನೀಡಿದರು.

ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಮಾತನಾಡಿ, ಯಾವುದೇ ಸಣ್ಣ,ಪುಟ್ಟ ಸಮಸ್ಯೆಗಳಿದ್ದರೆ ಅದನ್ನು ಗ್ರಾಮಸ್ಥರೇ ಹಿರಿಯರ ಸಮ್ಮುಖದಲ್ಲಿ ಬಗೆಹರಿಸಿಕೊಳ್ಳಬೇಕು. ಆದರೆ, ನೀವು ಕಾನೂನು ವಿರುದ್ಧವಾಗಿ, ಸಂವಿಧಾನಾತ್ಮಕವಾದ ಹಕ್ಕನ್ನು ನೀಡದೆ ವಂಚಿಸುವುದು ಸರಿಯಲ್ಲ. ಇದು ಘೋರ ಅಪರಾಧವಾಗುತ್ತದೆ, ಇಂತಹ ಘಟನೆ ಮರುಕಳಿಸದಂತೆ ಎಲ್ಲರೂ ಎಚ್ಚರಿಕೆ ವಹಿಸಬೇಕು. ಸಮಾನತೆಯ ಜೀವನನ್ನು ನಡೆಸಲು ಮುಂದಾಗಿ ಎಂದರು. ಗ್ರಾಮದ ಮುಖಂಡರಾದ ಕಾಲುವೇಹಳ್ಳಿ ಶ್ರೀನಿವಾಸ್, ಜಯಪಾಲಯ್ಯ, ದಲಿತ ಸಂಘಟನೆಗಳ ಮುಖಂಡರಾದ ಟಿ.ವಿಜಯಕುಮಾರ್, ಹೊನ್ನೂರುಸ್ವಾಮಿ, ಚನ್ನಗಾನಹಳ್ಳಿಮಲ್ಲೇಶ್, ಮೊರಾರ್ಜಿ, ನಾಗರಾಜು, ಬಸವರಾಜು, ತಹಶೀಲ್ದಾರ್ ರೇಹಾನ್‌ಪಾಷ, ಡಿವೈಎಸ್ಪಿ ಟಿ.ಬಿ.ರಾಜಣ್ಣ, ತಳಕು ವೃತ್ತ ನಿರೀಕ್ಷಕ ಹನುಮಂತಪ್ಪಸಿರಿಹಳ್ಳಿ, ಪಿಎಸ್‌ಐ ಲೋಕೇಶ್ ಮುಂತಾದವರು ಸಭೆಯಲ್ಲಿ ಭಾಗವಹಿಸಿದ್ದರು.

### ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ದೀಪಾವಳಿ ಸಾಮಾಗ್ರಿ ಮಾರಾಟ

» ಚಿತ್ರದುರ್ಗ

ಸಾರ್ವಜನಿಕರ ಹಾಗೂ ವಾಹನಗಳ ಸುಗಮ ಸಂಚಾರದ ಹಿತದೃಷ್ಟಿಯಿಂದ ದೀಪಾವಳಿ ಹಬ್ಬದ ಪ್ರಯುಕ್ತ ಬಾಳೆ ಎಲೆ, ಬಾಳೆ ಕಂದು, ಹೂವು, ಮಾವಿನ ಸೊಪ್ಪು ಹಾಗೂ ಇತರೆ ಪೂಜಾ ಸಾಮಗ್ರಿಗಳ ಮಾರಾಟ ಮಾಡಲು ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ವ್ಯವಸ್ಥೆ ಮಾಡಲಾಗಿದೆ. ಆದ್ದರಿಂದ ಬಾಳೆ ಎಲೆ, ಬಾಳೆ ಕಂದು, ಹೂವು, ಮಾವಿನ ಸೊಪ್ಪು ಹಾಗೂ ಇತರೆ ಪೂಜಾ ಸಾಮಗ್ರಿಗಳ ಮಾರಾಟಗಾರರು ನಗರದ ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ಮಾತ್ರ ಮಾರಾಟ ಮಾಡಬೇಕು ಹಾಗೂ ಸಾರ್ವಜನಿಕರು ಇಲ್ಲಿಯೇ ಪೂಜಾ ಸಾಮಗ್ರಿಗಳನ್ನು ಖರೀದಿಸಿ ಸಹಕರಿಸಬೇಕು ಎಂದು ಚಿತ್ರದುರ್ಗ ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ಕೋರಿದ್ದಾರೆ.

### ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ

» ಚಿತ್ರದುರ್ಗ

2023–24ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಶೇ.75 ಹಾಗೂ ಬಿ.ಎ, ಬಿ.ಕಾಂ, ಬಿಸಿಎ, ಬಿಎ□□ಡಬ್ಲ್ಯೂ, ಇಂಜಿನಿಯರಿಂಗ್, ಎಂ.ಬಿ.ಬಿ.ಎಸ್ ಇತರೆ ಪದವಿ ಪರೀಕ್ಷೆಯಲ್ಲಿ ಶೇ.70 ಅಂಕಗಳಿಸಿದ, ಪಿಹೆಚ್.ಡಿ ಪದವಿ,ಐಎಎಸ್,ಐಪಿಎಸ್,ಕೆಎಎಸ್ ಪರೀಕ್ಷೆಯಲ್ಲಿ ಆಯ್ಕೆಯಾದ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಪ್ರತಿಭಾನ್ವಿತರನ್ನು ಅಭಿನಂದಿಸಲು ಚಿತ್ರದುರ್ಗ ನಾಯಕ ನೌಕರರ ಕ್ಷೇಮಾಭಿವೃದ್ಧಿ ಸಂಘದಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ.ಆಸಕ್ತ ಅರ್ಹ ಅಭ್ಯರ್ಥಿಗಳು ನವೆಂಬರ್ 10ರೊಳಗೆ ತಮ್ಮ ಸ್ವ–ವಿವರದ ಅರ್ಜಿಯ ಜೊತೆ ಪೂರಕ ದಾಖಲಾತಿಗಳೊಂದಿಗೆ ಅಂಚೆ ಮೂಲಕ ಅಥವಾ ನೇರವಾಗಿ ಡಾ.ಹೆಚ್. ಗುಡ್ಡದೇಶ್ವರಪ್ಪ,ಅಧ್ಯಕ್ಷರು, ಚಿತ್ರದುರ್ಗ ವಾಲ್ಮೀಕಿ ನಾಯಕ ನೌಕರರ ಕ್ಷೇಮಾಭಿವೃದ್ಧಿ ಸಂಘ, ಮಾತೃ ಕೃಪ, ಎಂ.ಐ.ಜಿ 12/ಎ, ಕೆ.ಹೆಚ್.ಬಿ ಕಾಲೋನಿ, 3ನೇ ಹಂತ, ಸಾಧಿಕ್ ನಗರ ರಸ್ತೆ, ಚಿತ್ರದುರ್ಗ, ದೂರವಾಣಿ ಸಂಖ್ಯೆ 9448232934 ಇಲ್ಲಿಗೆ ಸಲ್ಲಿಸಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ಸಂಘದ ಪ್ರಧಾನ ಕಾರ್ಯದರ್ಶಿ ನಾಗೇಂದ್ರಬಾಬು ದೂರವಾಣಿ ಸಂಖ್ಯೆ 7483639318 ಗೆ ಸಂಪರ್ಕಿಸಬಹುದು ಎಂದು ಚಿತ್ರದುರ್ಗ ನಾಯಕ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಡಾ.ಗುಡ್ಡದೇಶ್ವರಪ್ಪ ತಿಳಿಸಿದ್ದಾರೆ.

### ಅರ್ಜಿ ಆಹ್ವಾನ ವಿಸ್ತರಣೆ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ಉಡುವಳ್ಳಿಯ ಜವಾಹರ್ ನವೋದಯ ವಿದ್ಯಾಲಯದಲ್ಲಿ 2025–26ನೇ ಸಾಲಿಗೆ 9 ಮತ್ತು 11ನೇ ತರಗತಿ ಪ್ರವೇಶಾತಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ಆಡಳಿತಾತ್ಮ ಕಾರಣಗಳಿಂದ ನ.9 ವರೆಗೆ ವಿಸ್ತರಿಸಲಾಗಿದೆ. 9ನೇ ತರಗತಿ ಪ್ರವೇಶ ಬಯಸುವ ಅಭ್ಯರ್ಥಿಗಳು 8 ತರಗತಿಯಲ್ಲಿ ಓದುತ್ತಿದ್ದು, 2010 ಮೇ 01 ರಿಂದ 2012 ಜುಲೈ 31 ಒಳಗೆ ಜನಿಸಿರಬೇಕು. 11 ತರಗತಿ ಪ್ರವೇಶ ಬಯಸುವ ಅಭ್ಯರ್ಥಿಗಳು 10ನೇ ತರಗತಿಯಲ್ಲಿ ಓದುತ್ತಿದ್ದು, 2008 ಜೂನ್ 1 ರಿಂದ 2010ರ ಜುಲೈ 31ರ ನಡುವೆ ಜನಿಸಿರಬೇಕು. ಅಭ್ಯರ್ಥಿಗಳು ಜಿಲ್ಲೆಯ ಖಾಯಂ ನಿವಾಸಿಯಾಗಿರಬೇಕು. ವೆಬ್‌ಸೈಟ್ https://cbsietms.nic.in/2024/nvsix/restrationclassIX/registrationclassIX ಹಾಗೂ https://cbsietms.nic.in/2024/nvsix/restrationclassXI/registrationclassXI ನಲ್ಲಿ ಅರ್ಜಿ ಸಲ್ಲಿಸಬಹುದು.

### ಮೂಲಭೂತ ಸೌಕರ್ಯ ಒದಗಿಸಿ ಶುಲ್ಕ ನಿಗದಿಪಡಿಸಲು ಜಿಲ್ಲಾಧಿಕಾರಿ ಸೂಚನೆ

# ಸಿಎಸ್‌ಆರ್ ನಿಧಿಯಡಿ ಕ್ರೀಡಾಂಗಣ ಅಭಿವೃದ್ಧಿ

» ಚಿತ್ರದುರ್ಗ

ಒನಕೆ ಓಬವ್ವ ಜಿಲ್ಲಾ ಕ್ರೀಡಾಂಗಣದಲ್ಲಿ ಮೂಲಭೂತ ಸೌಕರ್ಯ ಒದಗಿಸಿ ತರುವಾಯ ಬಳಕೆದಾರಿಗೆ ಸರ್ಕಾರದ ಮಾರ್ಗಸೂಚಿಗಳ ಅನುಸಾರ ಶುಲ್ಕ ನಿಗದಿಪಡಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಮಂಗಳವಾರ ಜರುಗಿದ ಜಿಲ್ಲಾ ಕ್ರೀಡಾಂಗಣ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕ್ರೀಡಾಂಗಣದಲ್ಲಿ ಮೂಲಭೂತ ಸೌಕರ್ಯಗಳನ್ನು ನೀಡಿದೆ, ಬಳಕೆದಾರರಿಂದ ಶುಲ್ಕ ವಸೂಲಿ ಮಾಡುವುದು ಸರಿಯಾದ ಕ್ರಮವಲ್ಲ. ಸದ್ಯ ಸುಸ್ಥಿತಿಯಲ್ಲಿ ಇರುವ ಷಟಲ್ ಬ್ಯಾಡ್ಮಿಂಟನ್, ಜಿಮ್ ಹಾಗೂ ಈಜುಕೊಳಕ್ಕೆ ಮಾತ್ರ ಶುಲ್ಕ ಸಂಗ್ರಹಿಸಬೇಕು. ಇದರ ಜೊತೆಗೆ ಕ್ರೀಡಾಂಗಣದಲ್ಲಿ ಆಯೋಜಿಸುವ ಕ್ರೀಡಾಕೂಟ ಹಾಗೂ ಶಿಬಿರಗಳಿಗೂ ಸಹ ನಿಯಮಾನುಸಾರ ಶುಲ್ಕ ವಿಧಿಸಬೇಕು. ಶಿಬಿರಗಳಲ್ಲಿ ಪಾಲ್ಗೊಳ್ಳುವ ಶಿಬಿರಾರ್ಥಿಗಳ ಸಂಖ್ಯೆ, ಅವರು ಬಳಸುವ ಸೌಕರ್ಯಗಳನ್ನು ಗಣನೆಗೆ ತೆಗೆದುಕೊಂಡು ಶುಲ್ಕ ನಿಗಧಿಪಡಿಸಬೇಕು. ಈ ಹಿಂದೆ ಜಿಲ್ಲಾ ಕ್ರೀಡಾಂಗಣ ನಗರದ ಸಾರ್ವಜನಿಕರಿಗೆ ಆಕರ್ಷಣೀಯ ಸ್ಥಳವಾಗಿತ್ತು. ಆದರೆ ನಿರ್ವಹಣೆ ಕೊರತೆಯಿಂದ ಕ್ರೀಡಾಂಗಣಕ್ಕೆ ಕೆಟ್ಟ ಹೆಸರು ಬಂದಿದೆ. ಬಳಕೆದಾರರ ಸಂಘ ಸಂಸ್ಥೆಗಳ ನೀಡುವ ಸಲಹೆ ಸೂಚನೆಗಳನ್ನು ಸ್ವೀಕರಿಸಿ, ಕ್ರೀಡಾಂಗಣದ ನಿರ್ವಹಣೆ ಕಾರ್ಯಕ್ಕೈಗೊಳ್ಳಬೇಕು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಎಸ್.ಎಂ.ನೆಲವಗಿ ಅವರಿಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ನಿರ್ದೇಶನ ನೀಡಿದರು.



ಸಿ.ಎಸ್.ಆರ್. ನಿಧಿಯಡಿ ಕ್ರೀಡಾಂಗಣ ಅಭಿವೃದ್ಧಿ

ಚಿತ್ರದುರ್ಗ ನಗರದ ಒನಕೆ ಓಬವ್ವ ಕ್ರೀಡಾಂಗಣ ಅಭಿವೃದ್ಧಿಗೆ ಈಗಾಗಲೇ ಕೆ.ಎಂ.ಇ.ಆರ್.ಸಿ ಅಡಿ ರೂ.50 ಕೋಟಿಗೆ ಕ್ರಿಯಾಯೋಜನೆಗೆ ರೂಪಿಸಿ ಅನುಮೋದನೆ ಕಳುಹಿಸಲಾಗಿದೆ ಎಂದು ಸಹಾಯಕ ನಿರ್ದೇಶಕಿ ಎಸ್.ಎಂ.ನೆಲವಗಿ ಸಭೆಯಲ್ಲಿ ತಿಳಿಸಿದರು.

ಕೆ.ಎಂ.ಇ.ಆರ್.ಸಿ ಅಡಿ ಕ್ರೀಡಾಂಗಣ ಕಟ್ಟಡ ನಿರ್ಮಾಣಕ್ಕೆ ಅನುದಾನ ಕೊಡುವುದು ಸಂಶಯ. ಸಿಂಥಟಿಕ್ ಟ್ರಾಕ್ ಹಾಗೂ ಇತರೆ ಕ್ರೀಡಾ ಸಮುಚ್ಚಯಗಳ ನಿರ್ಮಾಣಕ್ಕೆ ಮರು ಕ್ರೀಯಾ ಯೋಜನೆ ರೂಪಿಸಿ ಅನುಮೋದನೆ ಸಲ್ಲಿಸಿ. ಇದರ ಹೊರತಾಗಿ ಜಿಲ್ಲೆಯ ಕಂಪನಿಗಳ ಸಿ.ಎಸ್. ಆರ್ ನಿಧಿಯಡಿ ಕ್ರೀಡಾಂಗಣ ಅಭಿವೃದ್ಧಿ ಪ್ರಯತ್ನಿಸುವುದಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ಸಭೆಯಲ್ಲಿ ಜಿ.ಪಂ.ಸಿಇಓ ಎಸ್. ಜೆ.ಸೋಮಶೇಖರ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ, ಜಿಲ್ಲಾ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷ ಡಿ.ಎನ್. ಮೈಲಾರಪ್ಪ, ವಾಲಿಬಾಲ್ ತರಬೇತುದಾರ ಮಹಮದ್ ಮುಹಿಬುಲ್ಲಾ ಸೇರಿದಂತೆ ಕ್ರೀಡಾ ಬಳಕೆದಾರರು ಉಪಸ್ಥಿತರಿದ್ದರು.

# ಕುಷ್ಠರೋಗ ಪತ್ತೆ ಅಭಿಯಾನಕ್ಕೆ ಚಾಲನೆ

» ಚಿತ್ರದುರ್ಗ

ಕುಷ್ಠರೋಗ ಪ್ರಕರಣ ಪತ್ತೆ ಅಭಿಯಾನ ಜಾಗೃತಿ ಜಾಥಾಕ್ಕೆ ನಗರದ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಬುಧವಾರ ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಎಸ್.ಎ.ರವೀಂದ್ರ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ಜಾಥಾ ಕಾರ್ಯಕ್ರಮದಲ್ಲಿ ಜಿಲ್ಲಾ ಕುಷ್ಠರೋಗ ನಿವಾರಣಾಧಿಕಾರಿ ಡಾ.ಜಿ.ಓ.ನಾಗರಾಜ್ ಮಾತನಾಡಿ, ಜಿಲ್ಲೆಯಲ್ಲಿ ಈಗಾಗಲೇ 42 ಕುಷ್ಠರೋಗಿಗಳು ಚಿಕಿತ್ಸೆ ಪಡೆಯುತ್ತಿದ್ದಾರೆ. ಸಮುದಾಯದಲ್ಲಿರುವ ಕುಷ್ಠ ರೋಗಿಗಳನ್ನು ಪತ್ತೆ ಹಚ್ಚುವ ಹಿನ್ನಲೆಯಲ್ಲಿ ಜಿಲ್ಲೆಯಾದ್ಯಂತ ನವೆಂಬರ್ 04 ರಿಂದ 21 ರವರೆಗೆ 14 ದಿನಗಳ ಕಾಲ ಕುಷ್ಟರೋಗ ಪತ್ತೆ ಹಚ್ಚುವ ಅಭಿಯಾನ (ಎಲ್.ಸಿ.ಡಿ.ಸಿ) ಕಾರ್ಯಕ್ರಮವ ನಡೆಸಲಾಗುವುದು. ಸಮೀಕ್ಷೆ ಸಂಬಂಧ 1291 ತಂಡಗಳು, ಹಾಗೂ 129 ಮೇಲ್ವಿಚಾರಕರನ್ನು ನೇಮಿಸಲಾಗಿದೆ. ಆಶಾ ಕಾರ್ಯಕರ್ತರು ಹಾಗೂ ಪುರುಷ ಸ್ವಯಂಸೇವಕರು ಮನೆಮನೆ ಭೇಟಿ ನೀಡಿ ಕುಷ್ಟರೋಗ ಸಮೀಕ್ಷೆ ಮಾಡುವರು ಎಂದು ಮಾಹಿತಿ ನೀಡಿದರು.

ಕುಷ್ಟರೋಗವು ಶಾಪ ಪಾಪದಿಂದ ಬರುವ ಕಾಯಿಲೆಯಲ್ಲ, ಇದೊಂದು ಪುರಾತನ ಕಾಯಿಲೆ ಈ ಕಾಯಿಲೆಗೆ ಚಿಕಿತ್ಸೆ ಇದ್ದು, ರೋಗಿಗಳು ಹೆದರುವ ಅಗತ್ಯವಿಲ್ಲ. ಇದು ಮೈಕೋ ಬ್ಯಾಕ್ಟೀರಿಯಂ ಲೆಪ್ರೇ ಎಂಬ ರೋಗಾಣುವಿನಿಂದ ಬರುತ್ತದೆ.




ರೋಗಿಯು ಕೆಮ್ಮುವುದರಿಂದ, ಸೀನುವುದರಿಂದ ತುಂತುರ ಹನಿಗಳ ಮುಖಾಂತರ ಆರೋಗ್ಯವಂತ ವ್ಯಕ್ತಿಯ ದೇಹ ಸೇರಿದರೆ ಈ ರೋಗವು ಹರಡುತ್ತದೆ.

ಕುಷ್ಠ ರೋಗಕ್ಕೆ ಎಂಡಿಟಿ ಚಿಕಿತ್ಸೆ ಇದ್ದು, ರೋಗವನ್ನು ಸಂಪೂರ್ಣವಾಗಿ ಗುಣಪಡಿಸಬಹುದು. ಆದ್ದರಿಂದ ಸಾರ್ವಜನಿಕರು ತಮ್ಮ ಮನೆಗಳಿಗೆ ಬರುವ ತಂಡಗಳಿಂದ ಪರೀಕ್ಷೆ ಮಾಡಿಸುವ ಮೂಲಕ ಸಮೀಕ್ಷೆಗೆ ಸಹಕಾರ ನೀಡುವಂತೆ ಮನವಿ ಮಾಡಿದರು.

ನಗರದ ಪ್ರಮುಖ ಬೀದಿಗಳಲ್ಲಿ ಕೈ ಕೈಜೋಡಿಸಿ ಕುಷ್ಠರೋಗ ನಿವಾರಿಸಿ ಎಂಬ ಘೋಷಣೆ ಕೂಗುತ್ತಾ ಮದಕರಿ ಸರ್ಕಲ್‌ನಲ್ಲಿ ಮಾನವ ಸರಪಳಿ ನಿರ್ಮಿಸಿ ಜಾಗೃತಿ ಮೂಡಿಸಲಾಯಿತು.

ನಂತರ ನಗರದ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಜಾಥಾ ಕಾರ್ಯಕ್ರಮ ಸಮಾಪ್ತಿಗೊಂಡಿತು.

ಕಾರ್ಯಕ್ರಮದಲ್ಲಿ ಡಿಎಂಓ ಡಾ. ಎನ್. ಕಾಶಿ, ಆರ್‌ಸಿಹೆಚ್‌ಓ ಡಾ.ಡಿ.ಎಂ.ಅಭಿನವ್, ತಾಲೂಕು ಆರೋಗ್ಯಾಧಿಕಾರಿ ಅಧಿಕಾರಿ ಡಾ. ಬಿ.ವಿ.ಗಿರೀಶ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣ ನಾಯ್ಕ, ಉಪ ಜಿಲ್ಲಾ ಆರೋಗ್ಯ ಉಪ ಶಿಕ್ಷಣಾಧಿಕಾರಿ ಗೌರಮ್ಮ, ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್, ಎಸ್. ಮಂಜುನಾಥ್, ಮೂಗಪ್ಪ, ಡಿ ಎಲ್ ಓ ಕಚೇರಿ ಸಿಬ್ಬಂದಿಗಳಾದ ವೈ.ಟಿ.ತಿಪ್ಪೇಸ್ವಾಮಿ, ಚಂದ್ರಪ್ಪ, ಮಂಜುನಾಥ್, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಗಂಗಾಧರೆಡ್ಡಿ, ರುದ್ರಮುನಿ, ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳು ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು .

## "ದೀಪ ಸಂಜೀವಿನಿ"ಗೆ ಚಾಲನೆ



» ಚಿತ್ರದುರ್ಗ

ದೀಪಾವಳಿ ಹಬ್ಬದ ಪ್ರಯುಕ್ತ ನಗರದ ಒನಕೆ ಓಬವ್ವ ವೃತ್ತದಲ್ಲಿ ಮಂಗಳವಾರ ಆಯೋಜಿಸಲಾಗಿದ್ದ ಜಿಲ್ಲಾಮಟ್ಟದ "ದೀಪ ಸಂಜೀವಿನಿ" ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹಾಗೂ ಜಿಲ್ಲಾ ಪಂಚಾಯಿತಿ ಸಿಇಓ ಎಸ್.ಜೆ.ಸೋಮಶೇಖರ್ ಅವರು ಚಾಲನೆ ನೀಡಿದರು. ದೀಪ ಸಂಜೀವಿನಿ ಕಾರ್ಯಕ್ರಮದಲ್ಲಿ ಜಿಲ್ಲೆಯ ಆರು ತಾಲ್ಲೂಕುಗಳಿಂದ ಬಂದಂತಹ ಸ್ವ ಸಹಾಯ ಗುಂಪಿನ ಮಹಿಳೆಯರು ತಮ್ಮ ಸ್ವಂತ ಪರಿಶ್ರಮ ಹಾಗೂ ಕರ ಕುಶಲತೆಯಿಂದ ತಯಾರಿಸಿದ ದೀಪಗಳು, ಮಣ್ಣಿನ ಹಣತೆ, ಕೊಬ್ಬರಿ ಎಣ್ಣೆ, ತಿಂಡಿ–ತಿನಿಸುಗಳು, ಕೈಕಸೂತಿ ಬಟ್ಟೆ, ಬ್ಯಾಗ್, ಗೊಂಬೆ ಹಾಗೂ ವಿವಿಧ ಬಗೆಯ ಉಪ್ಪಿನಕಾಯಿ ಮತ್ತು ರೊಟ್ಟಿಯ ಖಾದ್ಯಗಳು ಸೇರಿದಂತೆ ಸ್ವದೇಶಿ ಉತ್ಪನ್ನಗಳನ್ನು ಪ್ರದರ್ಶಿಸಿ ಮಾರಾಟ ಮಾಡಲಾಯಿತು. ವಿಶೇಷವಾಗಿ ಹಲವು ರೀತಿಯಲ್ಲಿ ವಿನ್ಯಾಸ ಮಾಡಲಾಗಿದ್ದ ದೀಪಗಳು ನೋಡುಗರನ್ನು ಆಕರ್ಷಿಸಿದವು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಗಾಯತ್ರಿ ಸೇರಿದಂತೆ ಮತ್ತಿತರರು ಇದ್ದರು.

# ತುಂಬಿದ ಕರೇಕಲ್ ಕೆರೆ ಗಂಗಾಪೂಜೆ ಕಾರ್ಯದಲ್ಲಿ ಪಾಲ್ಗೊಂಡ ಗ್ರಾಮ ದೇವತೆಗಳು

» ಚಳ್ಳಕೆರೆ

ಪ್ರಸ್ತುತ ವರ್ಷದ ಹಿಂಗಾರು ಮಳೆ ಚಳ್ಳಕೆರೆ ತಾಲ್ಲೂಕಿಗೆ ಸಮೃದ್ದವಾಗಿ ಗಂಗಾದೇವಿಯ ದರ್ಶನ ಮಾಡಿಸಿದೆ. ನಗರ ವ್ಯಾಪ್ತಿಯ ಕೆರೆಗಳಲ್ಲದೆ, ಗ್ರಾಮೀಣ ಭಾಗದ ಎಲ್ಲಾ ಕೆರೆಗಳು ತುಂಬಿ, ಕೆಲವು ಕೋಡಿಬಿದ್ದಿವೆ.

ನಗರದ ನಾಯಕನಹಟ್ಟಿ ರಸ್ತೆಯಲ್ಲಿರುವ ಕರೇಕಲ್ ಕೆರೆಯೂ ಸಹ ಬಹಳ ವರ್ಷಗಳ ನಂತರ ತುಂಬಿಹರಿದಿದ್ದು, ಈ ಭಾಗದ ಜನರ ಸಂತೋಷ ಹೆಚ್ಚಾಗಿದೆ. ಕೆರೆ ತುಂಬಿದ ಹಿನ್ನೆಲೆಯಲ್ಲಿ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಗಂಗಾಪೂಜೆ ಸಲ್ಲಿಸಿರುತ್ತಾರೆ. ಚಳ್ಳಕೆರೆ ನಗರದ ಪುರಾತನ ಕೆರೆಗಳಲ್ಲಿ ಒಂದಾದ ಕರೇಕಲ್ ಕೆರೆ ತುಂಬಿದ ಹಿನ್ನೆಲೆಯಲ್ಲಿ ಗ್ರಾಮ



ದೇವತೆಗಳಾದ ಶ್ರೀಚಳ್ಳಕೆರೆಯಮ್ಮ, ಉಡಸಲಮ್ಮ ದೇವಿಯ ಮೆರವಣಿಗೆ ಜೊತೆಗೆ ಗಂಗಾಪೂಜೆ ಕಾರ್ಯಕ್ರಮವನ್ನು ಸಹ ನಡೆಸಲಾಯಿತು.

ದೇವಸ್ಥಾನದ ಧರ್ಮದರ್ಶಿ ಗೌಡ್ರರಾಮಣ್ಣ, ತಳವಾರರು, ಆಯಗಾರರು, ಮಡಿವಾಳರು, ದೇವಸ್ಥಾನದ ಆಡಳಿತ ಮಂಡಳಿ ಹಾಗೂ ಭಕ್ತರು ಸೇರಿ ಗಂಗಾಪೂಜೆ ಕಾರ್ಯಕ್ರಮವನ್ನು ಭಕ್ತಿಯಿಂದ ನಡೆಸಿದರು. ಪ್ರಾರಂಭದಲ್ಲಿ ಕೆರೆಯ ಏರಿಮೇಲೆ ಸ್ಥಾಪಿತವಾಗಿರುವ ಅಕ್ಕಮ್ಮದೇವತೆಗಳ ಪೂಜೆಯ ನಂತರ ಎರಡೂ ಗ್ರಾಮದೇವತೆಗಳನ್ನು ಸೂಜಿಮಲ್ಲೇಶ್ವರಸ್ವಾಮಿ ದೇವಸ್ಥಾನಕ್ಕೆ ಕರೆದ್ಯೊಯ್ದು ಪೂಜಾ ಕಾರ್ಯವನ್ನು ನೆರವೇರಿಸಲಾಯಿತು.

ನಂತರ ಅಲ್ಲಿಂದ ಕರೇಕಲ್ ಕೆರೆಯ ಕೋಡಿಪ್ರದೇಶಕ್ಕೆ ತಂದು ಗಂಗಾಪೂಜೆ ನೆರವೇರಿಸಿ ಬಾಗಿನ ಅರ್ಪಿಸಲಾಯಿತು. ನೂರಾರು ಭಕ್ತರು ಆಗಮಿಸಿ ಗ್ರಾಮ ದೇವತೆಗಳು ನಡೆಸಿದ ಗಂಗಾಪೂಜೆ ಕಾರ್ಯವನ್ನು ಕಣ್ತುಂಬಿಕೊಂಡರು. ಆಗಮಿಸಿದ್ದ ಭಕ್ತರಿಗೆ ಪ್ರಸಾದ ವಿತರಣೆ ಮಾಡಲಾಯಿತು.

ದೇವಸ್ಥಾನದ ಆಡಳಿತಮಂಡಳಿ ನಿರ್ದೇಶಕರಾದ ಪಿ.ತಿಪ್ಪೇಸ್ವಾಮಿ, ದಳವಾಯಿ ಮೂರ್ತಿ, ಚಿತ್ರಯ್ಯನಹಟ್ಟಿನಾಗರಾಜ, ಟೈಲರ್‌ವೀರೇಶ್, ಮಂಜುನಾಥ, ಬಸವರಾಜ, ನಾಗರಾಜ, ಕೋಟೆಚಂದ್ರಶೇ ಖರ್, ಚಿಕ್ಕಣ್ಣ, ನಾಗಣ್ಣ, ಪ್ರಸಾದ್, ರುದ್ರಣ್ಣ ಮುಂತಾದವರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ಕಾಲಮಿತಿ ಒಳಗೆ ಬೆಳೆ ವಿಮೆ ಪಾವತಿಸಿ; ಸಿದ್ದವೀರಪ್ಪ ಆಗ್ರಹ

» ಚಿತ್ರದುರ್ಗ

ಬೆಳೆ ವಿಮೆ ಕಟ್ಟಿರುವಂತಹ ರೈತರಿಗೆ ತಕ್ಷಣಕ್ಕೆ ಸ್ಥಳ ಸಮೀಕ್ಷೆ ಮಾಡಿ ವರದಿಯನ್ನು ತಯಾರಿಸಿ ಕಾಲಮಿತಿ ಒಳಗೆ ಬೆಳೆ ವಿಮೆಯನ್ನು ಕಡ್ಡಾಯವಾಗಿ ತಲುಪುವಂತೆ ಮಾಡಬೇಕು. ಮೊದಲನೇ ಬೆಳೆಯಿಂದ ಒಂದು ಪೈಸನೂ ಸಹ ಬಂಡವಾಳ ಬಂದಿಲ್ಲ.ಎರಡನೇ ಬೆಳೆಗೆ ಬಂಡವಾಳ ಹೂಡಿಕೆ ಮಾಡಲು ಆದಾಯವಿಲ್ಲ. ಆದ್ದರಿಂದ ವಿಮಾ ಕಂಪನಿಗಳು ಬೆಳೆ ವಿಮೆ ಮಾಡಿಸಿದವರ ಬೆಳೆ ಸಮೀಕ್ಷೆ ಮಾಡಿಸಿ ವರದಿ ತಯಾರಿಸಿ ಹಣ ಬಿಡುಗಡೆಗೆ ಕ್ರಮ ಕೈಗೊಳ್ಳಬೇಕು ಎಂದು ಸರ್ಕಾರ ಮತ್ತು ಜಿಲ್ಲಾಡಳಿತವನ್ನು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ನಂಜುಂಡಸ್ವಾಮಿಬಣ)ಯ ರಾಜ್ಯ ಪ್ರಧಾನ ಕಾರ್ಯದರ್ಶಿ ಈಚಘಟ್ಟ ಸಿದ್ದವೀರಪ್ಪ ಆಗ್ರಹಿಸಿದ್ದಾರೆ.

ನಗರದ ಪ್ರವಾಸಿ ಮಂದಿರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ವರ್ಷ ಅತ್ಯಂತ ತೀವ್ರವಾದ ಬರಗಾಲವನ್ನು ಎದುರಿಸಿದ್ದೇವೆ. ಈ ವರ್ಷ ಆರಂಭದಲ್ಲಿ ಬೆಳೆಗೆ ಪೂರಕವಾದ ಮಳೆಯಾಯಿತು ನಂತರ ಮಳೆ ಕೈಕೊಟ್ಟಿತು.. ಆದರೆ ಕೊನೆಯಲ್ಲಿ ಅತಿ ಮಳೆ ಹೆಚ್ಚು ಮಳೆ ಸುರಿದಿದೆ. ಅತಿ ಹೆಚ್ಚು ಮಳೆಯಿಂದ ಸಾಕಷ್ಟು ಬೆಳೆ ನಷ್ಟವಾಗಿದೆ. ಚಿಕ್ಕ ಚಿಕ್ಕ ಬೆಳೆಗಳು ಸಹ ನಾಶವಾಗಿವೆ.ಮುಂಗಾರಿನಲ್ಲಿ ಬಿತ್ತನೆ ಮಾಡಿದ್ದ ಮೆಕ್ಕೆಜೋಳ, ರಾಗಿ, ಶೇಂಗಾ, ಈರುಳ್ಳಿ ಬೆಳೆಗಳು ಮಳೆಯಿಂದ ಸಂಪೂರ್ಣ ನಷ್ಟವಾಗಿವೆ. 2ನೇ ಅವಧಿಯಲ್ಲಿ ಬೆಳೆಗಳನ್ನು ಬೆಳೆಯಲು ಪೂರಕವಾದ ವಾತಾವರಣವಿಲ್ಲ ಇಲ್ಲ ಎಂದು ತಿಳಿಸಿದರು.



ರೈತರಿಗೆ ಒಂದು ಎಕರೆಗೆ ಬಿತ್ತನೆ ಕಾರ್ಯಕ್ಕೆ 10 ಸಾವಿರ ಬೇಕಾಗುತ್ತದೆ.. ಆದ್ದರಿಂದ ಸರ್ಕಾರ ಕನಿಷ್ಠ ವೆಚ್ಚದ ಹಣವನ್ನು ನೀಡಬೇಕು,ಎಲ್ಲಿ ಹೆಚ್ಚು ಮಳೆಯಾಗಿರುವ ಪ್ರದೇಶದಲ್ಲಿ ಕೆರೆ ಅಚ್ಚುಕಟ್ಟು ಪ್ರದೇಶಗಳನ್ನು ಸುಸ್ಥಿತಿಯಲ್ಲಿಡಲು ಕ್ರಮ ಕೈಗೊಳ್ಳಬೇಕು. ಜಿಲ್ಲೆಯಲ್ಲಿ ಈರುಳ್ಳಿ ಬೆಳೆ ಸಂಪೂರ್ಣ ನಾಶವಾಗಿದೆ ಈರುಳ್ಳಿ ಬೆಳೆಗಾರರು ಸಂಕಷ್ಟದಲ್ಲಿದ್ದಾರೆ.. ಅದೇ ರೀತಿ ಶೇಂಗಾ ಬೆಳೆಗಾರರು, ಮೆಕ್ಕೆಜೋಳ ಬೆಳೆಗಾರರು, ಸಿರಿಧಾನ್ಯ ಬೆಳೆಗಾರರು ಅತಿ ಮಳೆಯಿಂದ ನಷ್ಟವನ್ನು ಅನುಭವಿಸಿದ್ದಾರೆ. ಎಲ್ಲೆಲ್ಲಿ ಬೆಳೆ ನಷ್ಟವಾಗಿದೆ ಎಂಬುದನ್ನು ಜಿಲ್ಲಾಡಳಿತ, ತಾಲ್ಲೂಕು ಆಡಳಿತ, ಕೃಷಿ ಇಲಾಖೆ ಸಮೀಕ್ಷೆ ನಡೆಸಿ ವರದಿ ನೀಡಿ ಬೆಳೆ ವಿಮೆ ನೀಡಲು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಲಾಯಿತು.ಇತ್ತೀಚೆಗೆ ಸುರಿದ ಭಾರಿ ಮಳೆಯಿಂದ ತೋಟಗಾರಿಕೆ ಬೆಳೆಗಳಾದ ಈರುಳ್ಳಿ ಟಮೋಟೊ ದಾಳಿಂಬ್ರೆ ಪಪ್ಪಾಯಿ ಮತ್ತು ಖುಷ್ಕಿ ಬೆಳೆಗಳಾದ ಶೇಂಗಾ ರಾಗಿ ಮೆಕ್ಕೆಜೋಳ ಇನ್ನೂ ಮುಂತಾದ ಬೆಳೆಗಳು ಅತಿವೃಷ್ಟಿಯಿಂದ ಹಾನಿಯಾಗಿದ್ದು ಇದರಿಂದ ರೈತರಿಗೆ ಆರ್ಥಿಕವಾಗಿ ಬಹಳ ತೊಂದರೆ ಆಗಿದ್ದು ತಕ್ಷಣ ರಾಜ್ಯ ಸರ್ಕಾರ ಬೆಳೆ ಪರಿಹಾರ ಬಿಡುಗಡೆ ಮಾಡಬೇಕೆಂದು ಮತ್ತು ವಿಮೆಗೆ ಒಳಪಟ್ಟ ಬೆಳೆಗಳಿಗೆ ತಕ್ಷಣ ಬೆಳೆ ವಿಮೆ ರೈತರ ಖಾತೆಗೆ ಜಮಾ ಮಾಡಬೇಕು ಇಲ್ಲವಾದರೆ ರೈತರ ಸಾಲವನ್ನು ಸಂಪೂರ್ಣ ಮನ್ನಾ ಮಾಡಬೇಕೆಂದು ಎಂದು ಒತ್ತಾಯಿಸಿ ಇದರ ಬಗ್ಗೆ ರಾಜ್ಯ ಸರ್ಕಾರ ಮತ್ತು ಜಿಲ್ಲಾಡಳಿತಕ್ಕೆ ಗಮನಕ್ಕೆ ತರಬೇಕಿದೆ ಇಲ್ಲವಾದಲ್ಲಿ ಜಿಲ್ಲಾಡಳಿತದ ಮತ್ತು ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಲು ತೀರ್ಮಾನ ಮಾಡಬೇಕಾಗುತ್ತದೆ ಎಂದು ಸರ್ಕಾರಕ್ಕೆ ಎಚ್ಚರಿಸಿದರು. ಚಿತ್ರದುರ್ಗ ಜಿಲ್ಲಾಧ್ಯಕ್ಷ ಡಿ.ಎಸ್ ಹಳ್ಳಿ ಮಲ್ಲಿಕಾರ್ಜುನ್, ಪ್ರಧಾನ ಕಾರ್ಯದರ್ಶಿ ನಿಜಲಿಂಗಪ್ಪ ಹಿರಿಯೂರು ತಾ.ಅಧ್ಯಕ್ಷ ತಿಪ್ಪೇಸ್ವಾಮಿ ಕಾರ್ಯದರ್ಶಿ ಸಿದ್ದರಾಮಣ್ಣ ಹೊಳಲ್ಕೆರೆ ರಂಗಸ್ವಾಮಿ, ಚಿತ್ರದುರ್ಗ ತಾ. ಅಧ್ಯಕ್ಷ ಮಂಜುನಾಥ್ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಸೈನಿಕರು, ಮಾಜಿ ಸೈನಿಕರಿಗೆ ಉದ್ಯೋಗ ನೇಮಕಾತಿಗಾಗಿ ಆನ್‌ಲೈನ್ ತರಬೇತಿ

» **ಚಿತ್ರದುರ್ಗ**

ಆರ್ಮಿ ವೇಲ್‌ಫೇರ್ ಪ್ಲೇಸ್‌ಮೆಂಟ್ ಆರ್ಗನೈಜೇಷನ್ (AWPO) ಮತ್ತು ದಿ ಮಾವೆನ್ ಕೊಹಾರ್ಟ್ (The Maven Cohort) ಎಂಬ ಸಂಸ್ಥೆಯ ಸಹಯೋಗದೊಂದಿಗೆ ಭಾರತೀಯ ಸೇನೆಯ ಜೆ.ಸಿ.ಓ (JCO ) ರ್‍ಯಾಂಕ್‌ವರೆಗಿನ ಕೊನೆಯ ವರ್ಷದ ನವೃತ್ತಿ ಅಂಚಿನಲ್ಲಿರುವ ಸೈನಿಕರು ಹಾಗೂ ನಿವೃತ್ತ ಮಾಜಿ ಸೈನಿಕರುಗಳ ಕೇಂದ್ರ ಸರ್ಕಾರಿ ಉದ್ಯೋಗ ಮತ್ತು ಬ್ಯಾಂಕ್ ಉದ್ಯೋಗ ನೇಮಕಾತಿಗಾಗಿ ಪಾವತಿಯ ಮೇರೆಗೆ ಪೂರ್ವ ತಯಾರಿ ಆನ್‌ಲೈನ್ ತರಬೇತಿಗಳನ್ನು ಪರಿಚಯಿಸುತ್ತಿದೆ. ನವೆಂಬರ್ 6 ರಿಂದ ತರಬೇತಿ ಆರಂಭಗೊಳ್ಳಲಿದ್ದು,ಆಸಕ್ತರು AWPO eÁ®vÁt https://me-qr.com/ZloLV2HS ನಲ್ಲಿ ನೊಂದಾಯಿಸಿಕಳ್ಳುವುದರ ಮೂಲಕ ತರಬೇತಿಯ ಸುವರ್ಣಾವಕಾಶವನ್ನು ಪಡೆದುಕೊಳ್ಳಬಹುದು.ಹೆಚ್ಚಿನ ಮಾಹಿತಿಗಾಗಿ ಆರ್ಮಿ ವೇಲ್‌ಫೇರ್ ಪ್ಲೇಸ್‌ಮೆಂಟ್ ಆರ್ಗನೈಜೇಷನ್ (AWPO) ನ ಜಾಲತಾಣವನ್ನು ಸಂಪರ್ಕಸಬಹುದು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಶಕ ಡಾ.ಆರ್.ಸಿ.ಹಿರೇಮಠ ತಿಳಿಸಿದ್ದಾರೆ.

### ಹೊಸದುರ್ಗಕ್ಕೆ ಇಂದು ಕನ್ನಡದ ಜ್ಯೋತಿ ಹೊತ್ತ ರಥಯಾತ್ರೆ

» **ಹೊಸದುರ್ಗ**

2024 ರ ಡಿಸೆಂಬರ್ 20, 21 ಹಾಗೂ 22 ಮೂರು ದಿನಗಳ ಕಾಲ ಮಂಡ್ಯದಲ್ಲಿ ನಡೆಯಲಿರುವ 87 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ದ ಅಂಗವಾಗಿ ಕನ್ನಡದ ಜ್ಯೋತಿ ಹೊತ್ತ ರಥಯಾತ್ರೆಯು ಈಗಾಗಲೆ ಚಿತ್ರದುರ್ಗ ಜಿಲ್ಲೆಯಲ್ಲಿ ಸಂಚರಿಸಿ ಅ.31 ರಂದು ಗುರುವಾರ ಮಧ್ಯಾಹ್ನ 12.30 ಕ್ಕೆ ಹೊಸದುರ್ಗ ಪಟ್ಟಣಕ್ಕೆ ಆಗಮಿಸಲಿದೆ ಎಂದು ಕ.ಸಾ.ಪ ತಾಲೂಕು ಅಧ್ಯಕ್ಷ ಬಿ.ಪಿ ಓಂಕಾರಪ್ಪ ತಿಳಿಸಿದ್ದಾರೆ.ಹೊಸದುರ್ಗ ತಾಲ್ಲೂಕನ್ನು ಪ್ರವೇಶಿಸುವ ಈ ಕನ್ನಡ ರಥವನ್ನು ಗೌರವಾದರಗಳೊಂದಿಗೆ ಬರಮಾಡಿಕೊಳ್ಳುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದ್ದು ಎಲ್ಲ ಕನ್ನಡ ಬಂಧುಗಳು, ಕನ್ನಡ ಪರ ಸಂಘಟನೆಗಳು, ತಾಲೂಕು ಆಡಳಿತ ಕಚೇರಿಯ ಅಧಿಕಾರ ವರ್ಗದವರು, ಶಾಲಾ ಕಾಲೇಜು ನೌಕರವರ್ಗದವರು, ವಿದ್ಯಾರ್ಥಿಗಳು, ಇತರೆ ಇಲಾಖೆಯ ಎಲ್ಲಾ ನೌಕರವರ್ಗದವರು, ಮತ್ತು ಸಮಸ್ತ ಕನ್ನಡ ಮನಸುಗಳು ಹಾಜರಿದ್ದು ಅದ್ದೂರಿಯಾಗಿ ಈ ಮೆರವಣಿಗೆಯೊಂದಿಗೆ ಪಟ್ಟಣದಲ್ಲಿ ಸಂಚರಿಸಿ ರಥಯಾತ್ರೆಯನ್ನು ಬೀಳ್ಕೊಡಬೇಕಿದ್ದು ಸರ್ವರೂ ಸಹ ಭಾಗವಹಿಸಬೇಕೆಂದು ಅವರು ಮನವಿ ಮಾಡಿದ್ದಾರೆ.

### ಚುನಾವಣೆಯಲ್ಲಿ ಸೋಲು-ಗೆಲುವು ಸಾಮಾನ್ಯ ಸರಕಾರದ ಆಡಳಿತ ಯಂತ್ರ ಸರಕಾರಿ ನೌಕರರ ಕೈಯಲ್ಲಿದೆ



» **ಹೊಸದುರ್ಗ**

ಸರಕಾರಿ ನೌಕರರ ಸಂಘದ ಚುನಾವಣೆ ಯಲ್ಲಿ ಆಯ್ಕೆಯಾದ ಎಲ್ಲ ಪದಾಧಿಕಾರಿಗಳಿಗೆ ಶುಭಾಶಯ ತಿಳಿಸುತ್ತೇನೆ. ಚುನಾವಣೆಯಲ್ಲಿ ಸೋಲು– ಗೆಲುವು ಸಾಮಾನ್ಯ. ಸೋತವರು, ಗೆದ್ದವರು ಇಬ್ಬರು ಸರಕಾರಿ ನೌಕರರು ಎಂಬುದನ್ನು ಮರೆಯಬಾರದು ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಕಿವಿ ಮಾತು ಹೇಳಿದರು.ಪಟ್ಟಣದಲ್ಲಿ ಬುಧವಾರ ಆಯೋಜಿಸಲಾಗಿದ್ದ ಸರಕಾರಿ ನೌಕರರ ಚುನಾವಣೆಯಲ್ಲಿ ಆಯ್ಕೆಯಾದ ನಿರ್ದೇಶಕರಿಗೆ ಆಯೋಜಿಸಲಾಗಿದ್ದ ಅಭಿನಂದನೆ ಕಾರ್ಯಕ್ರಮದಲ್ಲಿ ಅಭಿನಂದಿಸಿ ಮಾತನಾಡಿದರು. ಎಲ್ಲರೂ ಒಗ್ಗಟ್ಟಾಗಿ ಸಂಘದ ಕೆಲಸ ಮಾಡಬೇಕು. ಸರಕಾರದ ಆಡಳಿತ ಯಂತ್ರ ಸರಕಾರಿ ನೌಕರರ ಕೈಯಲ್ಲಿದೆ. ಸರಕಾರ ಹಲವು ಯೋಜನೆಗಳನ್ನು ಜಾರಿಗೆ ತರಬಹುದು. ಆದರೆ ಅವುಗಳನ್ನು ಅನುಷ್ಠಾನ ಗೊಳಿಸುವ ಜವಾಬ್ದಾರಿ ನಿಮ್ಮ ಮೇಲಿದೆ ಎಂದರು. ಈ ಸಂಧರ್ಬದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಸೈಯದ್ ಮೋಸಿನ್ ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಶಾಂತಪ್ಪ, ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಪ್ರಕಾಶ್, ಕಾರ್ಯದರ್ಶಿ ಹರೀಶ್, ಶಿಕ್ಷಣ ಸಂಯೋಜಕ ಶಶಿಧರ್‌ಕೆಂಚಪ್ಪ, ಎನ್.ಪಿ.ಎಸ್ ನೌಕರರ ಸಂಘದ ಅಧ್ಯಕ್ಷ ಪ್ರಶಾಂತ್, ಕರ್ನಾಟಕ ರಾಜ್ಯ ನೌಕರರ ಸಂಘದ ನೂತನವಾಗಿ ಆಯ್ಕೆಯಾದ ಶಾಂತಪ್ಪ, ದಿವಾಕರ್,ಬಸವರಾಜ್, ಅನಂತ ಮೂರ್ತಿ, ತಿಪ್ಪಯ್ಯ, ಮಲ್ಲೇಶಪ್ಪ, ಹೇಮಂತ್ ಮತ್ತಿತರರು ಹಾಜರಿದ್ದರು.

---

**ರೈತ ಉತ್ಪಾದಕರ ಸಂಸ್ಥೆಗಳ ಕಾರ್ಯ ದಕ್ಷತೆ ಹೆಚ್ಚಿಸಲು ಸಾಮರ್ಥ್ಯ ಅಭಿವೃದ್ಧಿ ತರಬೇತಿಯಲ್ಲಿ ಕೆವಿಕೆ ಕೀಟಶಾಸ್ತ್ರಜ್ಞ**

# ರೈತರ ಅಭಿವೃದ್ಧಿಗೆ ಸೇವಾ ಮನೋಭಾವದಿಂದ ಕಾರ್ಯನಿರ್ವಹಿಸಿ: ಡಾ.ಓಂಕಾರಪ್ಪ ಸಲಹೆ

» **ಚಿತ್ರದುರ್ಗ**

ರೈತ ಉತ್ಪಾದಕರ ಸಂಸ್ಥೆಗಳು ರೈತರ ಅಭಿವೃದ್ಧಿಗೆ ಸೇವ ಮನೋಭಾವನೆ, ಪ್ರಾಮಾಣಿಕತೆಮತ್ತುಪಾರದರ್ಶಕತೆಯಿಂದ ಕೆಲಸ ನಿರ್ವಹಿಸಬೇಕು ಎಂದು ಕೃಷಿ ವಿಜ್ಞಾನ ಕೇಂದ್ರದ ಕೀಟಶಾಸ್ತ್ರಜ್ಞರಾದ ಡಾ. ಓಂಕಾರಪ್ಪ ಹೇಳಿದರು.

ಹಿರಿಯೂರು ತಾಲ್ಲೂಕು ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಮಂಗಳವಾರ ಚಿತ್ರದುರ್ಗ ಜಿಲ್ಲೆಯ ವಿವಿಧ ಯೋಜನೆಗಳಡಿ ರಚಿತ ರೈತ ಉತ್ಪಾದಕರ ಸಂಸ್ಥೆಗಳ ಅಧ್ಯಕ್ಷರು, ಸಿಇಓ ಮತ್ತು ಕಾರ್ಯಕಾರಿ ಸಮಿತಿ ಸದಸ್ಯರಿಗೆ ಕಾರ್ಯ ದಕ್ಷತೆ ಹೆಚ್ಚಿಸಲು ಒಂದು ದಿನದ ಸಾಮರ್ಥ್ಯ ಅಭಿವೃದ್ಧಿ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹಿರಿಯೂರು ತಾಲ್ಲೂಕು ಬಬ್ಬೂರು ಫಾರಂನಲ್ಲಿ 2024ರ ನವೆಂಬರ್ ತಿಂಗಳ 9ನೇ ತಾರೀಕಿನಂದು ನಡೆಯುವ ಕೃಷಿ ಮೇಳಕ್ಕೆ ತಮ್ಮ ಎಲ್ಲಾ ಸದಸ್ಯರೊಂದಿಗೆ ಬಂದು ಕೃಷಿ ವಸ್ತು ಪ್ರದರ್ಶನ ಮತ್ತು ತಾಂತ್ರಿಕ ಕಾರ್ಯಗಾರದ ಸದುಪಯೋಗ ಪಡೆದುಕೊಳ್ಳಲು ಕೋರಿದರು. ನಬಾರ್ಡ ಸಂಸ್ಥೆಯಜಿಲ್ಲಾಅಭಿವೃದ್ಧಿವ್ಯವಸ್ಥಾಪಕರಾದ



ಕವಿತಾ ಮಾತನಾಡಿ, ರೈತ ಉತ್ಪಾದಕರ ಸಂಸ್ಥೆಗಳು ಪರಿಣಾಮಕಾರಿಯಾಗಿ ಕೆಲಸ ನಿರ್ವಹಿಸಿದರೆ, ರೈತರಿಗೆ ಕೇತ್ರ ಮಟ್ಟದಲ್ಲಿ ಕೃಷಿ ಪರಿಕರಗಳನ್ನು ಸಮಯಕ್ಕೆ ಸರಿಯಾಗಿ ತಲುಪಿಸುವುದರಿಂದ ರೈತರಿಗೆ ಸಮಯದ ಉಳಿತಾಯ ಹಾಗೂ ಸಾಗಣಿಕೆ ವೆಚ್ಚ ಕಡಿಮೆಯಾಗುವುದು ಎಂದರು.

ಚಳ್ಳಕೆರೆ ಉಪ ವಿಭಾಗದ ಉಪ ಕೃಷಿ ನಿರ್ದೇಶಕ ಡಾ. ಬಿಎನ್ ಪ್ರಭಾಕರ್ ಮಾತನಾಡಿ, ರೈತರ ಅಭಿವೃದ್ಧಿಗೆ ರೈತ ಉತ್ಪಾದಕರ ಸಂಸ್ಥೆಗಳ ಪಾತ್ರ ಬಹಳ ಪ್ರಾಮುಖ್ಯತೆಯನ್ನು ವಹಿಸಿದ್ದು, ಸದರಿ ಸಂಸ್ಥೆಗಳು ತಮ್ಮ ಶೇರುದಾರ ರೈತರಿಗೆ ಗುಣಮಟ್ಟದ ಕೃಷಿ ಪರಿಕರಗಳು ಒದಗಿಸಲು, ಬೆಳೆದ ಬೆಳೆಯನ್ನು ಖರೀದಿಸಲು ಮತ್ತು ಸಂಸ್ಕರಿಸಿ ಮೌಲ್ಯವರ್ಧನೆ ಮಾಡಿ ಉತ್ತಮ ಸೇವೆಯನ್ನು ಒದಗಿಸಲು ರೈತ ಉತ್ಪಾದಕರ ಸಂಸ್ಥೆಗಳ ಅಧ್ಯಕ್ಷರು, ಸಿಇಓ ಮತ್ತು ಕಾರ್ಯಕಾರಿ ಸಮಿತಿ ಸದಸ್ಯರು ಸೇವಾ ಮನೋಭಾವನೆಯಿಂದ ಕೆಲಸ ನಿರ್ವಹಿಸಬೇಕು. ಸದರಿ ಸಂಸ್ಥೆಗಳ ಕಾರ್ಯ ದಕ್ಷತೆ ಹೆಚ್ಚಿಸಲು ಇಂದಿನ ತರಬೇತಿಯ ಸದುಪಯೋಗ ಪಡೆದು ಕೊಳ್ಳಲು ಮನವಿ ಮಾಡಿದರು.

ಚಿತ್ರದುರ್ಗ ಉಪ ವಿಭಾಗದ ಉಪ ಕೃಷಿ ನಿರ್ದೇಶಕ ಕೆ.ಎಸ್.ಶಿವಕುಮಾರ್ ಮಾತನಾಡಿ, ರೈತ ಉತ್ಪಾದಕರ ಸಂಸ್ಥೆಗಳು ಸ್ವಾವಲಂಬನೆಯಿಂದ ಪ್ರಗತಿ ಸಾಧಿಸಲು ಇಂದಿನ ಸಾಮರ್ಥ್ಯ ಅಭಿವೃದ್ಧಿಯ ತರಬೇತಿಯ ತಾಂತ್ರಿಕ ಮಾಹಿತಿ ಮತ್ತು ಯಶಸ್ವಿಯಾದ ರೈತ ಉತ್ಪಾದಕರ ಸಂಸ್ಥೆಗಳ ಅಳವಡಿಸಿದ ಅನುಭವಗಳ ಮಾಹಿತಿಯ ಅವಶ್ಯಕತೆಯನ್ನು ಮನದಟ್ಟು ಮಾಡಿದರು. ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ್ ಮಾತನಾಡಿ, ವಿವಿಧ ತೋಟಗಾರಿಕೆ, ನಬಾರ್ಡ್ ಸಂಸ್ಥೆ, ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ, ಜಲಾನಯನ ಅಭಿವೃದ್ಧಿ ಯೋಜನೆ, ರಿವಾರ್ಡ ಯೋಜನೆಯಡಿ ರಚಿತ ರೈತ ಉತ್ಪಾದಕರ ಸಂಸ್ಥೆಗಳು ಸರ್ಕಾರದ ಯೋಜನೆಗಳನ್ನು ರೈತರಿಗೆ ತಲುಪಿಸುವಲ್ಲಿ, ರೈತರಿಗೆ ಗುಣಮಟ್ಟದ ಕೃಷಿ ಪರಿಕರಗಳ ಲಭ್ಯತೆ, ವ್ಯವಸ್ಥಿತ ಮಾರುಕಟ್ಟೆ ಕಲ್ಪಿಸುವುದು, ಕೃಷಿ ಉತ್ಪನ್ನಗಳ ಮೌಲ್ಯವರ್ಧನೆ ಮಾಡಿ ಆರೋಗ್ಯಕರ ವಿಷಮುಕ್ತ ಸಮಾಜದ ನಿರ್ಮಾಣ ಮತ್ತು ಪರಿಸರ ಸಂರಕ್ಷಣೆ ಮಾಡುವಲ್ಲಿ ಸಹಕಾರಿಯಾಗಬೇಕು ಎಂದದರು. ಕಾರ್ಯಕ್ರಮದಲ್ಲಿ ಕೆಇಎಫ್‌ಎ ಅಧ್ಯಕ್ಷ ಅರುಣ್ ಕುಮಾರ್, ಸಹಾಯಕ ಕೃಷಿ ನಿರ್ದೇಶಕ ಜಾರಿದಾಳ ಸಂಕಳ ಮಲ್ಲನಗೌಡ, ಇಕಾವೂ ಸಂಸ್ಥೆಯ ಸಂಪನ್ಮೂಲ ವ್ಯಕ್ತಿ ತಿಪ್ಪೇಸ್ವಾಮಿ, ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಮುಖ್ಯಸ್ಥ ಆರ್. ರಜನೀಕಾಂತ್ ಸೇರಿದಂತೆ ಆಸಕ್ತ 65 ಜನ ವಿವಿಧ ರೈತ ಉತ್ಪಾದಕರ ಸಂಸ್ಥೆಗಳ ಅಧ್ಯಕ್ಷರು, ಸಿಇಓ ಮತ್ತು ಕಾರ್ಯಕಾರಿ ಸಮಿತಿ ಸದಸ್ಯರು ಭಾಗವಹಿಸಿದ್ದರು.

---

## ಜಿಲ್ಲೆಗೆ ಆಗಮಿಸಿರುವ ಕನ್ನಡ ರಥ ಯಾತ್ರೆಗೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸ್ವಾಗತ

» **ಚಿತ್ರದುರ್ಗ**

ನಾಡು,ನುಡಿಯ ಬೆಳವಣಿಗೆಗೆ ಎಲ್ಲರ ಸಹಕಾರ ಅಗತ್ಯ ಎಂದು ತಹಸೀಲ್ದಾರ್ ನಾಗವೇಣಿ ಹೇಳಿದರು. ಅವರು ಮಂಗಳವಾರ ಕನ್ನಡ ರಥವನ್ನು ಜಿಲ್ಲೆಗೆ ಸ್ವಾಗತಿಸಿ ಮಾತನಾಡಿದರು. ಕನ್ನಡ ಅತ್ಯಂತ ಶ್ರೀಮಂತ ಇತಿಹಾಸವನ್ನು ಹೊಂದಿರುವ ಭಾಷೆಯಾಗಿದೆ. ಕಲಿಯಲು ಅತ್ಯಂತ ಸುಲಭವಾಗಿರುವ ಭಾಷೆಗೆ ನಾನಾ ವಿಧದ ಪ್ರಕಾರಗಳಿವೆ. ಶಾಸ್ತೀಯ ಭಾಷೆಯ ಸ್ಥಾನ,ಮಾನವನ್ನು ಹೊಂದಿರುವ ಇದರ ಬೆಳವಣಿಗೆಗೆ ಎಲ್ಲರೂ ಶ್ರಮಿಸಬೇಕು. ಕನ್ನಡದ ಸಮ್ಮೇಳನ ಹಾಗೂ ಮೆರವಣಿಗೆಗಳು ಹಬ್ಬದಂತೆ ಆಚರಿಸಲ್ಪಡುತ್ತವೆ. ಇದಕ್ಕೆ ಕನ್ನಡಿಗರ ಅಭಿಮಾನ ಕಾರಣವಾಗಿದೆ. ಇದೀಗ ಸಂಚರಿಸುತ್ತಿರುವ ರಥವು ಕನ್ನಡ ನಾಡಿನ,ಸಂಸ್ಕೃತಿ,ಕಲೆ ಮತ್ತು ವಿಜ್ಞಾನವನ್ನು ಪ್ರತಿನಿಧಿಸುತ್ತಿದೆ ಎಂದರು.

ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಕೆ.ಎಂ.ಶಿವಸ್ವಾಮಿ ಮಾತನಾಡಿ, ಡಿ.20 ರಿಂದ ಮೂರು ದಿನಗಳ ಕಾಲ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಮಂಡ್ಯದಲ್ಲಿ ಜರುಗಲಿದೆ. ಇದರ ಅಂಗವಾಗಿ ಕನ್ನಡ ರಥವು ಇಡೀ ರಾಜ್ಯದಲ್ಲಿ ಸಂಚರಿಸುತ್ತಿದೆ. ಉತ್ತರ ಕನ್ನಡ ಜಿಲ್ಲೆಯ ಏಕೈಕ ಕನ್ನಡ ಭುವನೇಶ್ವರಿಯ ದೇವಾಲಯದಿಂದ ಆರಂಭವಾಗಿರುವ ಈ ರಥವು ಸಮ್ಮೇಳನ ಜರುಗುವ ಮಂಡ್ಯದಲ್ಲಿ ಸಮಾರೋಪಗೊಳ್ಳಲಿದೆ. ರಾಜ್ಯದ ಎಲ್ಲ ತಾಲ್ಲೂಕು ಕೇಂದ್ರಗಳ ಮೂಲಕ ಸಂಚರಿಸುವ ರಥವು ಎಲ್ಲ ಕನ್ನಡಿಗರಿಗೆ ಸಮ್ಮೇಳನದಲ್ಲಿ



ಭಾಗವಹಿಸಲು ಅಧೀಕೃತ ಆಹ್ವಾನ ನೀಡುತ್ತಿದೆ. ಮೂರು ದಿನಗಳ ಕಾಲ ಜಿಲ್ಲೆಯಲ್ಲಿ ಸಂಚರಿಸುವ ರಥವು ಗುರುವಾರ ಚಿಕ್ಕಮಗಳುರು ಜಿಲ್ಲೆಯನ್ನು ಪ್ರವೇಶಿಸಲಿದೆ ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರ ಸ್ವಾಮಿಯವರು ಒನಕೆ ಓಬವ್ವ ವೃತ್ತದಲ್ಲಿ ಹೂಮಾಲೆ ಅರ್ಪಿಸಿ ನಮನ ಸಲ್ಲಿಸಿದರು. ಬಿಇಒ ನಾಗಭೂಷಣ್, ನಗರಸಭೆ ಪೌರಾಯುಕ್ತರಾದ ಎಂ.ರೇಣುಕ, ತಾಪಂ ಇಒ ವೈ.ರವಿಕುಮಾರ್, ನಗರ ಸಭೆ ಅಧ್ಯಕ್ಷೆ ಸುಮಿತ,ಉಪಾಧ್ಯಕ್ಷೆ ಶ್ರೀದೇವಿ, ಕೆಡಿಪಿ ಸದಸ್ಯ ಕೆ.ಸಿ.ನಾಗರಾಜ್, ಗ್ರೇಡ್ 2 ತಹಸೀಲ್ದಾರ್ ನಾಗರಾಜ್, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಮಂಜುನಾಥ್, ಚಿತ್ರದುರ್ಗ ತಾಲ್ಲೂಕು ಕಸಾಪ ಅಧ್ಯಕ್ಷ ವಿ.ಎಲ್.ಪ್ರಶಾಂತ್, ಪದಾಧಿಕಾರಿಗಳಾದ ಶ್ರೀನಿವಾಸ ಮಳಲಿ, ಕೆ.ಜಿ. ಅಜಯ್ ಕುಮಾರ್, ಮತ್ತಿತರರಿದ್ದರು.

## ತಾಲ್ಲೂಕು ಸರ್ಕಾರಿ ನೌಕರರ ಸಂಘ ನಿರ್ದೇಶಕರಾಗಿ ಆಯ್ಕೆಯಾದ ಎಂ.ಶ್ರೀನಿವಾಸ್‌ಗೆ ಅಭಿನಂದನೆ



» **ಚಳ್ಳಕೆರೆ**

ತಾಲ್ಲೂಕು ಸರ್ಕಾರಿ ನೌಕರರ ಸಂಘದ ನಿರ್ದೇಶಕರಾಗಿ ಚುನಾವಣೆ ಮೂಲಕ ಆಯ್ಕೆಯಾದ ಸರ್ಕಾರಿ ಪದವಿಪೂರ್ವ ಕಾಲೇಜಿನ ಅರ್ಥಶಾಸ್ತ್ರ ಉಪನ್ಯಾಸಕ ಎಂ.ಶ್ರೀನಿವಾಸ್‌ರವರನ್ನು ಕಾಲೇಜಿನ ಪ್ರಾಂಶುಪಾಲರು ಮತ್ತು ಸಿಬ್ಬಂದಿ ವರ್ಗ ಅಭಿನಂದಿಸಿದರು.

ಪ್ರಾಂಶುಪಾಲ ಕೆ.ತಿಮ್ಮಯ್ಯ ಮಾತನಾಡಿ, ಕರ್ನಾಟಕ ರಾಜ್ಯ ಸರ್ಕಾರಿನೌಕರರ ಸಂಘ ಕಳೆದ ಹಲವಾರು ವರ್ಷಗಳಿಂದ ತನ್ನ ಕಾರ್ಯಚಟುವಟಿಕೆಮೂಲಕಸರ್ಕಾರಿನೌಕರರಿಗೆರಕ್ಷಣೆನೀಡುವುದಲ್ಲದೆ, ಸಮಸ್ಯೆಗಳು ಎದುರಾಗದಾಗ ಅವುಗಳ ನಿವಾರಣೆಗೆ ಪ್ರಾಮಾಣಿಕ ಪ್ರಯತ್ನ ನಡೆಸಿದೆ. ನಮ್ಮ ಕಾಲೇಜಿನ ಅರ್ಥಶಾಸ್ತ್ರ ಉಪನ್ಯಾಸಕ ಎಂ.ಶ್ರೀನಿವಾಸ್ ನೌಕರರ ಸಮಸ್ಯೆಯ ಬಗ್ಗೆ ಸಾಕಷ್ಟು ಮಾಹಿತಿ ಪಡೆದಿದ್ದಾರೆ. ಅವರನ್ನು ಕಾಲೇಜು ವತಿಯಿಂದಲೇ ಚುನಾವಣೆಗೆ ನಿಲ್ಲಿಸಿದ್ದು, ಗೆಲುವು ಸಾಧಿಸುವ ಮೂಲಕ ಕೀರ್ತಿತಂದಿದ್ದಾರೆಂದರು. ಜಿಲ್ಲಾ ಉಪನ್ಯಾಸಕ ಸಂಘ ಮಾಜಿ ಅಧ್ಯಕ್ಷ ಎಸ್.ಲಕ್ಷ್ಮಣ್, ಶ್ರೀನಿವಾಸ್‌ರವರನ್ನು ಅಭಿನಂದಿಸಿ ಸರ್ಕಾರಿ ನೌಕರರ ಸಂಘ ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸುತ್ತಿದೆ. ಸಂಘದ ಬಲದಿಂದಲೇ ಇಂದು ಸರ್ಕಾರಿ ನೌಕರರು ನೆಮ್ಮದಿಯಿಂದ ಜೀವನ ನಡೆಸುವಂತಾಗಿದೆ. ಸಂಘದ ತಾಲ್ಲೂಕು ನಿರ್ದೇಶಕರಾಗಿ ಆಯ್ಕೆಯಾದ ಎಂ.ಶ್ರೀನಿವಾಸ್ ಇಲ್ಲಿನ ನೌಕರರ ಸಮಸ್ಯೆಗಳ ನಿವಾರಣೆಗೆ ಹೆಚ್ಚು ಸ್ಪಂದಿಸುವರು ಎಂಬ ವಿಶ್ವಾಸ ನನಗಿದೆ ಎಂದರು. ನಿವೃತ್ತ ಪ್ರಾಚಾರ್ಯ ಎಂ.ರವೀಶ್, ಹಿರಿಯ ಉಪನ್ಯಾಸಕ ಕೆ.ಎನ್.ವಸಂತಕುಮಾರ್, ಬಿ.ಶಾಂತಕುಮಾರಿ, ಟಿ.ಲಲಿತಮ್ಮ, ಜಿ.ಟಿ.ಪುಷ್ಪಲತಾ, ಎಚ್.ಆರ್. ಹಭಿಬುಲ್ಲಾ, ನಾಗರಾಜಬೆಳಗಟ್ಟ, ಕುಮಾರಸ್ವಾಮಿ, ನಾಗಭೂಷಣ್, ಕೆ.ವಿ.ಚಂದ್ರಶೇಖರ್, ಮಂಜುನಾಥ, ಇಮ್ರಾನ್, ಗ್ರಂಥಪಾಲಕ ನರಸಿಂಹಮೂರ್ತಿ ಮುಂತಾದವರು ಉಪಸ್ಥಿತರಿದ್ದರು.

## ಉದ್ಯೋಗಗಳಆಗಾಗಿ ಆನ್‌ಲೈನ್ ಮೂಲಕ ತರಬೇತಿ

ದಾವಣಗೆರೆ: ಆರ್ಮಿ ವೆಲ್‌ಫೇರ್ ಪ್ಲೆಸ್‌ಮೆಂಟ್ ಆರ್ಗನೈಜೇಷನ್ ಮತ್ತು ಮಾವಿನ್ ಕೊಹರ್ಟ್ ಎಂಬ ಸಂಸ್ಥೆಯ ಸಹಯೋಗದೊಂದಿಗೆ ಭಾರತೀಯ ಸೇನೆಯ ನಿವೃತ್ತಿನಂಚಿನಲ್ಲಿರುವ ಸೈನಿಕರು ಹಾಗೂ ಮಾಜಿ ಸೈನಿಕರುಗಳಿಗೆ ಕೇಂದ್ರ, ರಾಜ್ಯ ಉದ್ಯೋಗ ಮತ್ತು ಬ್ಯಾಂಕ್ ಉದ್ಯೋಗ ನೇಮಕಾತಿಗಾಗಿ ಆನ್‌ಲೈನ್ ತರಬೇತಿಗಳನ್ನು ಆಯೋಜಿಸಲಾಗಿದೆ. ನ.6 ರಿಂದ ತರಬೇತಿಗಳು ಪ್ರಾರಂಭವಾಗಲಿದ್ದು, ಆಸಕ್ತರು ಜಾಲತಾಣ http://me-qr.com/ZloLV2HS ನಲ್ಲಿ ನೋಂದಾಯಿಸಬಹುದು ಹಾಗೂ ಹೆಚ್ಚಿನ ಮಾಹಿತಿಗಾಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಸಂಪರ್ಕಿಸಲು ಉಪನಿರ್ದೇಶಕ ಡಾ.ಸಿ.ಎ ಹಿರೇಮಠ ತಿಳಿಸಿದ್ದಾರೆ.

---

**ಪ್ರಮುಖ ಸುದ್ದಿ**

**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ರೋಣ ವಾಸುದೇವ ಮಾಹಿತಿ**

# ಡಿ.14 ರಂದು ಲೋಕಾದಲತ್: 3939 ಪ್ರಕಣಗಳ ಇತ್ಯರ್ಥಕ್ಕೆ ಗುರಿ

» **ಚಿತ್ರದುರ್ಗ**

ಡಿಸೆಂಬರ್ 14 ರಂದು ರಾಷ್ಟ್ರೀಯ ಲೋಕ ಅದಾಲತ್ ನಡೆಯಲಿದ್ದು, ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಬಾಕಿ ಇರುವ 44,917 ಪ್ರಕರಣಗಳ ಪೈಕಿ 3939 ಪ್ರಕರಣಗಳ ಇತ್ಯರ್ಥಕ್ಕೆ ಗುರಿ ನಿಗದಿಪಡಿಸಿಕೊಳ್ಳಲಾಗಿದೆ. ಈಗಾಗಲೇ 38 ಪಕ್ರರಣಗಳನ್ನು ಇತ್ಯರ್ಥ ಪಡಿಸಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ರೋಣ ವಾಸುದೇವ ಹೇಳಿದರು.

ಮಂಗಳವಾರ ನಗರದ ಜಿಲ್ಲಾ ನ್ಯಾಯಾಲಯದ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು. ಪಕ್ಷಗಾರರು ರಾಜೀ ಸಂಧಾನದ ಮೂಲಕ ತಮ್ಮ ಪ್ರಕರಣಗಳನ್ನು ಸುಲಭ ಹಾಗೂ ಶೀಘ್ರವಾಗಿ ಯಾವುದೇ ಶುಲ್ಕ, ಖರ್ಚು ವೆಚ್ಚವಿಲ್ಲದೇ ತೀರ್ಮಾನ ಮಾಡಿಕೊಳ್ಳಬಹುದು. ಕಳೆದ ಸೆಪ್ಟಂಬರ್ 14 ರಂದು ಜರುಗಿದ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಜಿಲ್ಲೆಯಲ್ಲಿ ಬಾಕಿ ಇದ್ದ 45,558 ಪ್ರಕರಣಗಳ ಪೈಕಿ 4146 ವ್ಯಾಜ್ಯ



ಪ್ರಕರಣಗಳನ್ನು ರಾಜಿ ಸಂದಾನದ ಮೂಲಕ ಇತ್ಯರ್ಥ ಪಡಿಸಲಾಗಿದೆ. ಈ ಮೂಲಕ ಶೇ.10 ಪಕ್ರಣಗಳನ್ನು ಇತ್ಯರ್ಥ ಮಾಡುವ ಮೂಲಕ ನ್ಯಾಯಲಯದ ಮೇಲಿನ ಹೊರೆಯನ್ನು ತಗ್ಗಿಸಲಾಗಿದೆ.

ಆದರೂ ಕೂಡ ಲೋಕ ಅದಾಲತ್ ಬಳಿಕವು ಹೊಸ ಪ್ರಕರಣಗಳು ದಾಖಲಾಗಿದ್ದು, ಚಾಲ್ತಿ ಪ್ರಕರಣಗಳ ಸಂಖ್ಯೆ 44917ಕ್ಕೆ ಏರಿಕೆಯಾಗಿದೆ. ರಾಜಿ ಆಗಬಹುದಾದ 321, ಚೆಕ್ ಅಮಾನ್ಯದ 4775 ಬ್ಯಾಂಕ್ ವಸೂಲಾತಿ 1558, ಖಾಸಗಿ ಸಾಲ ವಸೂಲಾತಿ 688, ಅಪಘಾತದ 2561, ಆಸ್ತಿ ಪಾಲುಗಾರಿಕೆಯ 3809 ಹಾಗೂ ಜನನ ಮತ್ತು ಮರಣ ನೊಂದಣಿಗೆ ಸಂಬಂಧಿಸಿದ 1559 ಚಾಲ್ತಿ ಪ್ರಕರಣಗಳು ಜಿಲ್ಲೆಯಾದ್ಯಂತ ವಿವಿಧೆ ಹಂತದ ನ್ಯಾಯಾಲಯಗಳಲಿವೆ ಎಂದು ಜಿಲ್ಲಾ ನ್ಯಾಯಾಧೀಶ ರೋಣ ವಾಸುದೇವ ಮಾಹಿತಿ ನೀಡಿದರು.

ಈ ಎಲ್ಲಾ ಪ್ರಕರಣಗಳೊಂದಿಗೆ ಉದ್ಯೋಗ, ಕಾರ್ಮಿಕ, ವೇತನ, ವಿದ್ಯುತ್, ನೀರು ಇತರೆ ಸೇವಾ ಶುಲ್ಕದ ಪ್ರಕರಣಗಳನ್ನು ಇತ್ಯರ್ಥ ಪಡಿಸಲು ಅವಕಾಶವಿದೆ. ಇದರರೊಂದಿಗೆ ನ್ಯಾಯಾಲಯದ ವ್ಯಾಜ್ಯದಲ್ಲಿರುವ ನಾನ್ ಕಾಂಪೌಡಬಲ್ ಹಾಗೂ ಗಂಭೀರ ತರದ ಅಪರಾಧಿಕ ಪ್ರಕರಣಗಳನ್ನು ಹೊರತು ಪಡಿಸಿ, ಇತರೆ ಪ್ರಕರಣಗಳನ್ನು ಬರುವ ಡಿಸೆಂಬರ್ 14 ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ರಾಜಿ ಮಾಡಿಕೊಳ್ಳಬಹುದು. ಕಕ್ಷಿದಾರರು ನೇರವಾಗಿ ಅಥವಾ ವಕೀಲರ ಮೂಲಕ ಲೋಕಅದಾಲತ್‌ನಲ್ಲಿಭಾಗವಹಿಸಬಹುದು ಇದರ ಸದುಪಯೋಗ ಪಡೆದುಕೊಳ್ಳುವಂತೆ ನ್ಯಾಯಾಧೀಶ ರೋಣ ವಾಸುದೇವ ಕಕ್ಷಿದಾರರಲ್ಲಿ ಕೋರಿದ್ದಾರೆ. ಹಿಂದೂ ವಿವಾಹ ಕಾಯ್ದೆಯ ಕಲಂ 9 ಅಡಿ ಪತಿ ಅಥವಾ ಪತ್ನಿ ಜೊತೆಯಲ್ಲಿ ವಾಸಿಸಲು ದಾಖಲಿಸಿರುವಪ್ರಕರಣಗಳನ್ನು ಈಬಾರಿಯ ಲೋಕ ಅದಾಲತ್‌ನಲ್ಲಿ ಆದ್ಯತೆಯ ಮೇಲೆ ಬಗೆಹರಿಸಲು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಿಂದ ಚಿಂತನೆ ನಡೆಸಲಾಗಿದೆ. ಜಿಲ್ಲಾದ್ಯಂತ ಇಂತಹ 181 ಪ್ರಕರಣಗಳು ನ್ಯಾಯಾಲಯಗಳ ಮುಂದಿವೆ. ಇದರಲ್ಲಿ ಚಿತ್ರದುರ್ಗ ನಗರಕ್ಕೆ ಸಂಬಂಧಿಸಿದ 71 ಪಕ್ರಣಗಳನ್ನು ರಾಜಿ ಮೂಲಕ ಇತ್ಯರ್ಥಕ್ಕೆ ಪ್ರಯತ್ನಿಸಲಾಗುವುದು. ಇದರ ಅಂಗವಾಗಿ ಸಂಬಂಧ ಪಟ್ಟ ಪ್ರಕರಣಗಳ ವಕೀಲರು ಹಾಗೂ ಕಕ್ಷಿದಾರರೊಂದಿಗೆ ಸಮಾಲೋಚನೆ ಸಭೆ ನಡೆಸುವುದಾಗಿ ನ್ಯಾಯಾಧೀಶ ರೋಣ ವಾಸುದೇವ ಈ ಸಂದರ್ಭದಲ್ಲಿ ತಿಳಿಸಿದರು. ಸಾರ್ವಜನಿಕರು ಲೋಕ ಅದಾಲತ್ ಕುರಿತು ಹೆಚ್ಚಿನ ಪ್ರಶ್ನೆ ಮತ್ತು ಮಾಹಿತಿಗಾಗಿ ಬೇಕಾದಲ್ಲಿ ಇ–ಮೇಲ್ dlsachitradurga2@gmail.com ಹಾಗೂ ಸದಸ್ಯ ಕಾರ್ಯದರ್ಶಿಯವರ ಕಚೇರಿ ಮೊಬೈಲ್ ಸಂಖ್ಯೆ 9141193935 ಹಾಗೂ ದೂರವಾಣಿ ಸಂಖ್ಯೆ 08194– 222322 ಕ್ಕೆ ಸಹ ಸಂಪರ್ಕಿಸಬಹುದು ಎಂದು ನ್ಯಾಯಾಧೀಶ ರೋಣ ವಾಸುದೇವ ಹೇಳಿದರು.


ಪತ್ರಿಕಾಗೋಷ್ಠಿಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಕುಮಾರಸ್ವಾಮಿಗೆ ರಾಜ್ಯೋತ್ಸವ ಪ್ರಶಸ್ತಿ

» ಹೊಸದುರ್ಗ

ಚಿತ್ರಕಲಾ ಕ್ಷೇತ್ರದಲ್ಲಿ ಅಪಾರವಾದ ಸಾಧನೆ ಮಾಡಿರುವ ತಾಲೂಕಿನ ಹೆಸರಾಂತ ಚಿತ್ರಕಲಾವಿದ ಎಂ.ಬಿ.ಕುಮಾರಸ್ವಾಮಿ ಯವರಿಗೆ



ರಾಜ್ಯೋತ್ಸವದ ಅಂಗವಾಗಿ ತಾಲೂಕು ಆಡಳಿತದಿಂದ ಕೊಡಮಾಡಲ್ಪಡುವ 2024-25 ನೇ ಸಾಲಿನ ತಾಲೂಕು ರಾಜೋತ್ಸವ ಪ್ರಶಸ್ತಿ ಲಭಿಸಿದೆ. ಕುಮಾರಸ್ವಾಮಿಯುವರು ಕೃಷಿಕ (ವಾನದ) ಬಸಪ್ಪ ಹಾಗೂ ನಂಜಮ್ಮನವರ ಸುಪುತ್ರರಾಗಿದ್ದು ಮೈಸೂರು ವಿಶ್ವವಿದ್ಯಾಲಯ ಬಿಎಫ್ಎ ವಿಭಾಗದಲ್ಲಿ 5 ವರ್ಷ ಅಧ್ಯಾಯನ ಹೊಂದಿ ತರಬೇತಿ ಪಡೆದು ಮೂರು ವರ್ಷ ವಿಶೇಷ ಪೈಂಟಿಂಗ್ ವಿಭಾಗದಲ್ಲಿ ಅಧ್ಯಾಯನ ಮಾಡಿ ತರಬೇತಿ ಪಡೆದ ಕುಮಾರಸ್ವಾಮಿ ಚಾಮರಾಜೇಂದ್ರ ಅಕಾಡಮಿ ಆಪ್ ವಿಶುಯಲ್ ಆರ್ಟ್ಸ್ ಮೈಸೂರಿನಲ್ಲಿ 5 ವರ್ಷ ಮಧುಗಿರಿ ರಾಮು ಅವರ ಮಾರ್ಗದರ್ಶನದಲ್ಲಿ ತೈಲ ವರ್ಣ ಚಿತ್ರಗಳ ಅನುಭವ ಪಡೆದು ಚಿತ್ರಕಲಾ ಪರಿಷತ್ತು ಬೆಂಗಳೂರಿನಲ್ಲಿ 1992ರಿಂದ 1994 ರವರೆಗೆ ಹವ್ಯಾಸಿ ಕಲಾ (ಸಾಂಪ್ರದಾಯಿಕ ಚಿತ್ರಕಲೆ) ತರಗತಿಗಳಿಗೆ ಹಾಗೂ ಬೇಸಿಗೆ ಕಲಾ ತರಗತಿಗಳಿಗೆ ಬೋಧಕರಾಗಿ, 1992-93 ಮತ್ತು 1993 ಮತ್ತು 94 ರಲ್ಲಿ ನಡೆದ 14 ಮತ್ತು 15 ನೇ ಅಖಿಲ ಭಾರತೀಯ ಚಿತ್ರಕಲಾ ಪ್ರದರ್ಶನದ ಉಸ್ತುವಾರಿಯಾಗಿ 1995-96 ರಲ್ಲಿ ತುಮಕೂರಿನ ರವೀಂದ್ರ ಆಪ್ ಫೈನ್ ಆರ್ಟ್ಸ್ ಕಾಲೇಜಿನಲ್ಲಿ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸಿರುವ ಇವರಿಗೆ ಸಾಕಷ್ಟು ಪ್ರಶಸ್ತಿ ಸನ್ಮಾನಗಳು ಲಭಿಸಿವೆ. ಇವರು ಕೇವಲ ಚಿತ್ರಕಲಾವಿದರಾಗದೆ ಛಾಯಾ ಚಿತ್ರ ಕ್ಷೇತ್ರದಲ್ಲೂ (ಪೋಟೋಗ್ರಾಫರ್) ಉತಮ ಹೆಸರು ಮಾಡಿರುವ ಜೋತೆಗೆ ಸಮಾಜ ಸೇವೆಯಲ್ಲೂ ಸಹಾ ತೋಡಗಿಸಿಕೊಂಡಿರುವುದು ವಿಶೇಷ.ನ. 1 ರಂದು ಶುಕ್ರವಾರ ಪಟ್ಟಣದ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ನಡೆಯಲಿರುವ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ತಾಲೂಕು ಆಡಳಿದಿಂದ ಪ್ರಶಸ್ತಿ ಹಾಗೂ ಸನ್ಮಾನವನ್ನ ಸ್ವೀಕರಿಸಲಿದ್ದು ಕುಮಾರಸ್ವಾಮಿಯವರಿಗೆ ಚಿತ್ರಕಲೆ ಮತ್ತು ವಿಶೇಷ ತೈಲವರ್ಣ ಚಿತ್ರಗಳ ಕಲೆಗೆ ಈ ಭಾರಿ ತಾಲೂಕು ರಾಜ್ಯೋತ್ಸವ ಪ್ರಶಸ್ತಿ ಲಭಿಸಿದೆ.

### ಹರಾಜು ಪ್ರಕ್ರಿಯೆಯಿಂದ ಹೊಸದುರ್ಗ ಪುರಸಭೆಗೆ 20 ಲಕ್ಷ ಆದಾಯ

» ಹೊಸದುರ್ಗ

ಸಂತೆ ಮಾರುಕಟ್ಟೆ, ಪುಟ್‌ಬಾತ್ ಸುಂಕ, ಸೋಮವಾರದ ಸಂತೆ, ಶೌಚಾಲಯಗಳು ಮತ್ತು ನೀರು ಸರಬರಾಜುಗಳ ಅನುಪಯುಕ್ತ ವಸ್ತುಗಳು, ಹಳೆಯ ದಿನ ಪತ್ರಿಕೆ ಹಾಗೂ ಇತರೆ ಬಹಿರಂಗ ಹರಾಜು ಮೂಲಕ ಪುರಸಭೆ ಸದಸ್ಯರು ಮತ್ತು ಬಿಡ್‌ದಾರರ ಸಮ್ಮುಕದಲ್ಲಿ ವಿಲೇವಾರಿ ಮಾಡಿರುವ ಪುರಸಭೆಗೆ 20 ಲಕ್ಷಕ್ಕು ಹೆಚ್ಚು ಆಧಾಯಗಳಿಸಿದೆ ಎಂದು ಪುರಸಭೆ ಮುಖ್ಯಾಧಿಕಾರಿ ತಿಮ್ಮರಾಜು.ಜಿ.ವಿ ತಿಳಿಸಿದ್ದಾರೆ.ಪಟ್ಟಣದ 23 ವಾರ್ಡ್‌ಗಳಿಗೆ ಮೂಲ ಭೂತ ಸೌಕರ್ಯಗಳನ್ನು ಪುರಸಭೆ ಕಲ್ಪಿಸುತ್ತಾ ಬಂದಿದ್ದು ಸರ್ವತ್ತೋನುಮುಖ ಅಭಿವೃದ್ಧಿಗೆ ಆಧಾಯ ಸಂಗ್ರಹಣೆ ಪ್ರಮುಖವಾಗಿದ್ದು ಸ್ವಚ್ಚತೆ, ನೀರು ಸರಬರಾಜು, ಹಾಗೂ ವಿದ್ಯುತ್ ದೀಪ ನಿರ್ವಹಣೆಗೆ ಬಳಕೆ ಮಾಡಲಾಗುತ್ತಿದೆ ಎಂದರು. ಕಂದಾಯಾಧಿಕಾರಿ ಬಿ.ಎಲ್ ಯೋಗೇಶ್ ಮಾತನಾಡಿ ಈ ಬಾರಿ ಹೆಚ್ಚು ತೆರಿಗೆ ಸಂಗ್ರಹವಾಗಿದ್ದು ಶೌಚಾಲಯಗಳಿಂದ 7.5 ಲಕ್ಷ, ತರಕಾರಿ ಮಾರುಕಟ್ಟೆ ನೆಲವಳಿ ಸುಂಕ ರೂ.4.3 ಲಕ್ಷ, ಸೋಮವಾರ ನಡೆಯುವ ಸಂತೆ, ಮೀನು ಮಾರುಕಟ್ಟೆ ನೆಲವಳಿ ಸುಂಕ, ರಸ್ತೆ ಬದಿ ಗೂಡು ಅಂಗಡಿಗಳ ಸುಂಕ ರೂ 5.45 ಲಕ್ಷ, ಖಾಸಗಿ ಬಸ್‌ಗಳ ಫೀ ರೂ.1.10 ಲಕ್ಷಗಳು ಸಂಗ್ರಹಿಸಲಾಗಿದೆ ಎಂದರು. ಈ ಸಂದರ್ಭದಲ್ಲಿ ಮಾಜಿ ಅಧ್ಯಕ್ಷರಾದ ಶ್ರೀನಿವಾಸ್, ಸದಸ್ಯರಾದ ಮಂಜುನಾಥ್, ಜಾಫರ್ ಸಾಧಿಕ್, ರಾಮಚಂದ್ರ.ಹೆಚ್, ನಾಗರಾಜ್, ದಾಳಿಂಬೆ ಗಿರೀಶ್, ಸಿಬ್ಬಂದಿಗಳಾದ ಸಾವಿತ್ರಿ, ಕರವಸೂಲಿಗಾರರಾದ ವಿನಯ್, ಮಂಜುನಾಥ, ಲಿಂಗಾರಾಜು ಮತ್ತಿತರರು ಹಾಜರಿದ್ದರು.

### ಪುರಸ್ಕಾರಕ್ಕೆ ಅರ್ಜಿ

» ಚಿತ್ರದುರ್ಗ

2023-24ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಶೇ.75 ಹಾಗೂ ಬಿ.ಎ, ಬಿ.ಕಾಂ, ಬಿಸಿಎ, ಬಿಎಸ್‌ಡಬ್ಲ್ಯೂ, ಇಂಜಿನಿಯರಿಂಗ್, ಎಂ.ಬಿ.ಬಿ.ಎಸ್ ಇತರೆ ಪದವಿ ಪರೀಕ್ಷೆಯಲ್ಲಿ ಶೇ.70 ಅಂಕಗಳಿಸಿದ, ಪಿಹೆಚ್.ಡಿ ಪದವಿ,ಐಎಎಸ್,ಐಪಿಎಸ್,ಕೆಎಎಸ್ ಪರೀಕ್ಷೆಯಲ್ಲಿ ಆಯ್ಕೆಯಾದ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಪ್ರತಿಭಾನ್ವಿತರನ್ನು ಅಭಿನಂದಿಸಲು ಚಿತ್ರದುರ್ಗ ನಾಯಕ ನೌಕರರ ಕ್ಷೇಮಾಭಿವೃದ್ಧಿ ಸಂಘದಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅರ್ಹ ಅಭ್ಯರ್ಥಿಗಳು ನವೆಂಬರ್ 10ರೊಳಗೆ ತಮ್ಮ ಸ್ವ-ವಿವರದ ಅರ್ಜಿಯ ಜೊತೆ ಪೂರಕ ದಾಖಲಾತಿಗಳೊಂದಿಗೆ ಅಂಚೆ ಮೂಲಕ ಅಥವಾ ನೇರವಾಗಿ ಡಾ.ಹೆಚ್. ಗುಡ್ಡದೇಶ್ವರಪ್ಪ,ಅಧ್ಯಕ್ಷರು, ಚಿತ್ರದುರ್ಗ ವಾಲ್ಮೀಕಿ ನಾಯಕ ನೌಕರರ ಕ್ಷೇಮಾಭಿವೃದ್ಧಿ ಸಂಘ, ಮಾತೃ ಕೃಪ, ಎಂ.ಐ.ಜಿ 12/ಎ, ಕೆ.ಹೆಚ್.ಬಿ ಕಾಲೋನಿ, 3ನೇ ಹಂತ, ಸಾಧಿಕ್ ನಗರ ರಸ್ತೆ, ಚಿತ್ರದುರ್ಗ, ದೂರವಾಣಿ ಸಂಖ್ಯೆ 9448232934 ಇಲ್ಲಿಗೆ ಸಲ್ಲಿಸಲು ಸೂಚಿಸಿದೆ.

# ರಾಷ್ಟ್ರದ ಏಳಿಗೆಗಾಗಿ ಸಮಗ್ರತೆಯ ಸಂಸ್ಕೃತಿ ಅಂಗ ವೈಕಲ್ಯತೆ ಪಾಪವಲ್ಲ: ಮಹಾವೀರ್ ಮ.ಕರೆಣ್ಣವರ

» ದಾವಣಗೆರೆ

ಅಂಗವೈಕಲ್ಯ ಪಾಪವಲ್ಲ, ಬಿಕ್ಕಟ್ಟನ್ನು ಅವಕಾಶಗಳಾಗಿ ಪರಿವರ್ತಿಸುವ ಅವಕಾಶ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಎಂ. ಕರಣ್ಣನವರ ಹೇಳಿದರು.



ಬುಧುವಾರ(30) ರಂದು ನಗರದ ಸಿಆರ್‌ಸಿ ಆವರಣದಲ್ಲಿ ಕರ್ನಾಟಕ ರಾಜ್ಯ ಲೋಕಾಯುಕ್ತ ಇವರ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಸಿಕಂದರಾಬಾದ್‌ನ ಬೌದ್ಧಿಕ ವಿಕಲಾಂಗ ವ್ಯಕ್ತಿಗಳ ಸಬಲೀಕರಣಕ್ಕಾಗಿ ರಾಷ್ಟ್ರೀಯ ಸಂಸ್ಥೆಯ ಆಡಳಿತಾತ್ಮಕ ನಿಯಂತ್ರಣದಡಿಯಲ್ಲಿ ಸಂಯೋಜಿತ ಪ್ರಾದೇಶಿಕ ಕೇಂದ್ರ, ವಿಕಲಾಂಗ ವ್ಯಕ್ತಿಗಳ ಸಬಲೀಕರಣ ಇಲಾಖೆ (ದಿವ್ಯಾಂಗಜನ್), ಸಾಮಾಜಿಕ ನ್ಯಾಯ ಮತ್ತು ಮತ್ತು ಸಬಲೀಕರಣ ಸಚಿವಾಲಯ, ಭಾರತ ಸರ್ಕಾರವು 'ಅರಿವು ಜಾಗೃತಿ ಸಪ್ತಾಹವನ್ನು ಆಚರಿಸುತ್ತಿದ್ದು, 2024 ರ 28 ಅಕ್ಟೋಬರ್ ರಿಂದ ನವೆಂಬರ್ 3 ರವರೆಗೆ ಭಾರತದ ನಾಗರಿಕರಿಗೆ "ರಾಷ್ಟ್ರದ ಏಳಿಗೆಗಾಗಿ ಸಮಗ್ರತೆಯ ಸಂಸ್ಕೃತಿ' ಎಂಬ ವಿಷಯದೊಂದಿಗೆ ಜಾಗೃತಿ ಸಪ್ತಾಹದ ಅಂಗವಾಗಿ "ಭ್ರಷ್ಟಾಚಾರ ಮುಕ್ತ ಭಾರತ" ಎಂಬ ವಿಷಯದ ಕುರಿತು ಜಾಗೃತಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತಾನಾಡಿದ ಅವರು "ಭ್ರಷ್ಟಾಚಾರ ಮುಕ್ತ ಭಾರತ", ಆರ್‌ಪಿಡಬ್ಲ್ಯೂಡಿ ಕಾಯ್ದೆ, ಆರ್‌ಟಿಐಕಾಯ್ದೆ,ವಿಕಲಚೇತನರಹಕ್ಕುಗಳು ಮತ್ತು ಭಾರತ ಸರ್ಕಾರವು ಒದಗಿಸಿರುವ ನಿಬಂಧನೆಗಳು, ಯೋಜನೆಗಳ ಕುರಿತು ಅರಿವು ಮೂಡಿಸಿದರು. ಕೇಂದ್ರ ಮತ್ತು ರಾಜ್ಯ ಸರ್ಕಾರದ ಜೊತೆಗೆ ವಿಕಲಾಂಗ ವ್ಯಕ್ತಿಗಳಿಗೆ ಒದಗಿಸುವ ಸಿಆರ್‌ಸಿ ಸೇವೆಗಳನ್ನು ನೋಡುವ ಮೂಲಕ ನಾನು ತುಂಬಾ ಸಂತೋಷಗೊಂಡಿದ್ದೇನೆ ಎಂದರು.

ಲೋಕಾಯುಕ್ತ ಪೊಲೀಸ್ ಅಧೀಕ್ಷಕ .ಎಂ.ಎಸ್.ಕೌಲಾಪೂರಮಾತನಾಡಿ,ಲಂಚ ನೀಡುವುದು ಮತ್ತು ತೆಗೆದುಕೊಳ್ಳುವುದು ಎರಡೂ ಅಪರಾಧಗಳೆಂದು ಪ್ರತಿಯೊಬ್ಬ ನಾಗರಿಕರು ಅರಿತು ಸೂಕ್ತ ಸರ್ಕಾರಗಳಿಂದ ಕೆಲಸಗಳನ್ನು ಮಾಡಿಸಿಕೊಳ್ಳಬೇಕು ಎಂದರು.

ಸಿಆರ್‌ಸಿ ನಿರ್ದೇಶಕರಾದ ಮೀನಾಕ್ಷಿ ಮಾತಾನಾಡಿ ನಮ್ಮ ಜಿಲ್ಲೆಯ ಪ್ರಗತಿಯಲ್ಲಿರುವ ಪ್ರಮುಖ ಅಡೆತಡೆಗಳಲ್ಲಿ ಒಂದು ಭ್ರಷ್ಟಾಚಾರವಾಗಿದೆ, ಭ್ರಷ್ಟಾಚಾರ ಮುಕ್ತ ಭಾರತ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಪ್ರತಿಯೊಬ್ಬರೂ ಭ್ರಷ್ಟಾಚಾರ ಮತ್ತು ಸಂವೇದನಾಶೀಲರಾಗಿರಬೇಕು ಎಂದರು.

ಸಹಾಯಕ ಸಸ್ಯ ಆರೈಕೆದಾರರ ವೃತ್ತಿಪರ ತರಬೇತಿ ಕೋರ್ಸ್ ಪೂರ್ಣಗೊಳಿಸಿದ ಸಿಆರ್‌ಸಿ ವಿದ್ಯಾರ್ಥಿಗಳಿಗೆ ಕೋರ್ಸ್ ಪೂರ್ಣಗೊಳಿಸಿದ ಪ್ರಮಾಣಪತ್ರಗಳನ್ನು ವಿತರಿಸಿದರು.

ಕಾರ್ಯಕ್ರಮದಲ್ಲಿ ಸಿಆರ್‌ಸಿ ವಿದ್ಯಾರ್ಥಿಗಳು, ವಿಕಲಚೇತನರು, ಸಿಆರ್‌ಸಿಯ 90 ಮಂದಿ ಭಾಗವಹಿಸಿದ್ದರು.

## ಚಿಕ್ಕ ಮಕ್ಕಳಿಗೆ ನೀಡುವ ಸಂಸ್ಕಾರ ಶಾಶ್ವತ: ಶಾಸಕ

» ಹೊಸದುರ್ಗ

ನಾಡಿನ ಸಂಸ್ಕೃತಿ ಸಂಸ್ಕಾರ ಅನಾವರಣ ಜೊತೆಗೆ ಮಕ್ಕಳ ಪ್ರತಿಭೆ ಗುರುತಿಸುವ ಕಾರ್ಯಕ್ರಮ ಇದಾಗಿದ್ದು ಇತಿಹಾಸ, ಸಂಸ್ಕೃತಿ ಗೆ ನಮ್ಮ ನಾಡು ಹೆಸರು ವಾಸಿಯಾಗಿದೆ. ಚಿಕ್ಕ ಮಕ್ಕಳಿಗೆ ನೀಡುವ ಸಂಸ್ಕಾರ ಶಾಶ್ವತವಾಗಿ ನೆಲೆಯೂರುತ್ತದೆ. ಇಂತಹ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕು ಎಂದು ಶಾಸಕ, ಕರ್ನಾಟಕ ರಾಜ್ಯ ಆಹಾರ ನಿಗಮದ ಅಧ್ಯಕ್ಷ ಬಿ. ಜಿ. ಗೋವಿಂದಪ್ಪ ತಿಳಿಸಿದರು.



ಪಟ್ಟಣದ ಸಂತ ಅಂಥೋನಿ ಶಾಲೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಬುಧವಾರ ಆಯೋಜಿಸಲಾಗಿದ್ದ ತಾಲೂಕು ಮಟ್ಟದ ಪ್ರತಿಭಾ ಕಾರಂಜಿ - ಕಲೋತ್ಸವ ಉದ್ಘಾಟಿಸಿ ಮಾತನಾಡಿದರು

ಚಿಕ್ಕ ವಯಸ್ಸಿನಲ್ಲಿ ನೀಡುವ ಶಿಕ್ಷಣ, ಸಂಸ್ಕಾರವೂ ಮಕ್ಕಳು ಭವಿಷ್ಯದಲ್ಲಿ ಉತ್ತಮ ಬದುಕು ಕಟ್ಟಿಕೊಳ್ಳಲು ನೆರವಾಗುತ್ತದೆ.

ಅಕ್ಷರವನ್ನು ಎಲ್ಲರೂ ಕಲಿಸುತ್ತಾರೆ. ಆದರೆ ಅಭಿನಯದ ಮೂಲಕ ಕಲೆಯನ್ನು ಪ್ರದರ್ಶಿಸುವಂತೆ ಹೇಳಿಕೊಡುವುದು ಕಷ್ಟದ ಕೆಲಸ ತೀರ್ಪುಗಾರರು ಮಕ್ಕಳ ಪ್ರತಿಭೆಯನ್ನು ಸರಿಯಾಗಿ ಗುರುತಿಸಬೇಕು. ಸ್ನೇಹಿತರು ಹಾಗೂ ಸಂಬಂಧಿಕರ ಮಕ್ಕಳು ಎಂದು ಪ್ರಶಸ್ತಿಗೆ ಪರಿಗಣಿಸುವಂತಿಲ್ಲ. ತಾರತಮ್ಯ ಮಾಡದೆ ತೀರ್ಪು ನೀಡಬೇಕು. ಮಕ್ಕಳ ಮನಸ್ಸಿಗೆ ಘಾಸಿಯಾಗಬಾರದು ಎಂದು ತೀರ್ಪು ಗಾರರಿಗೆ ಸೂಚನೆ ನೀಡಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಸೈಯದ್ ಮೋಸಿನ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಾಲೆಯ ಆಡಳಿತ ಅಧಿಕಾರಿ ವಿಕ್ಟರ್ ಪಾಯಿಸ್, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಶಾಂತಪ್ಪ, ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಪ್ರಕಾಶ್, ಕಾರ್ಯದರ್ಶಿ ಹರೀಶ್, ಶಿಕ್ಷಣ ಸಂಯೋಜಕ ಶಶಿಧರ್ ಮತ್ತಿತರರು ಉಪಸ್ಥಿತರಿದ್ದರು.

## ದೀಪ ಸಂಜೀವಿನಿ, ಆಹಾರ ಮೇಳ, ಸಂಸದರಿಂದ ಉದ್ಘಾಟನೆ



ದಾವಣಗೆರೆ: ಜಿಲ್ಲಾ ಪಂಚಾಯಿತಿ, ಎನ್.ಆರ್.ಎಲ್.ಎಂ ಸಂಜೀವಿನಿ-ಕೆ.ಎಸ್.ಆರ್.ಎಲ್.ಪಿ.ಎಸ್ ವತಿಯಿಂದ ಅ.30 ರಂದು ನಗರದ ಬಿ.ಎಸ್ ಚನ್ನಬಸಪ್ಪ & ಸನ್ಸ್ ಎಕ್ಸ್ಲೂಜಿವ್ ಅಂಗಡಿ, ಡೆಂಟಲ್ ಕಾಲೇಜ್ ರೋಡ್ ಮತ್ತು ಕೆ.ಎಸ್.ಆರ್.ಟಿ.ಸಿ ಬಸ್ ಸ್ಟಾಂಡ್ ಹತ್ತಿರ ಆಯೋಜಿಸಿಲಾಗಿದ್ದ ದೀಪ ಸಂಜೀವಿನಿ ಕಾರ್ಯಕ್ರಮವನ್ನು ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಉದ್ಘಾಟಿಸಿ, ದೀಪಗಳನ್ನು ಖರೀದಿಸಿದರು. ಬಿ.ಎಸ್.ಚನ್ನಬಸಪ್ಪ ಅಂಗಡಿ ಮಾಲೀಕರಾದ ಬಿ.ಎಸ್ ಶಿವಕುಮಾರ್ ಕಾರ್ಯಕ್ರಮದ ಕುರಿತು ಮಾತಾನಾಡಿದರು. ಎನ್‌ಆರ್‌ಎಲ್‌ಎಂ ಯೋಜನೆಯ ಸಂಜೀವಿನಿ ಸ್ವಸಹಾಯ ಸಂಘಗಳು ಉತ್ಪಾದಿಸಿದ ಉತ್ಪನ್ನಗಳಾದ ಮಣ್ಣಿನ ದೀಪ ಮತ್ತು ಇತರೆ ಅಲಂಕಾರಿಕ ಆಹಾರ ಪದಾರ್ಥಗಳನ್ನು ಮಾರಾಟ ಮಾಡಲಾಯಿತು. 20 ಕ್ಕೂ ಹೆಚ್ಚು ಸಂಜೀವಿನಿ ಸ್ವಸಹಾಯ ಸಂಘಗಳು ಭಾಗವಹಿಸಿ ವಿವಿಧ ಬಗೆಯ ದೀಪಗಳನ್ನು, ಅಲಂಕಾರಿಕ ವಸ್ತುಗಳನ್ನು ಮತ್ತು ಆಹಾರ ಪದಾರ್ಥಗಳನ್ನು ಮಾರಾಟ ಮಾಡಿ, ಸುಮಾರು 1,10,000/-ರೂಗಳವರೆಗೆ ಉತ್ಪನ್ನಗಳನ್ನು ಮಾರಾಟ ಮಾಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿಯ ಉಪಕಾರ್ಯದರ್ಶಿ ಕೃಷ್ಣನಾಯ್ಕ, ಯೋಜನಾ ನಿರ್ದೇಶಕರಾದ ರೇಷ್ಮಾ, ಮುಖ್ಯ ಯೋಜನಾಧಿಕಾರಿ ಮಲ್ಲನಾಯ್ಕ ಹಾಗೂ ಎನ್‌ಆರ್‌ಎಲ್‌ಎಂ ಡಿ.ಪಿ.ಎಂ ಭೋಜರಾಜ ಹಾಗೂ ಜಿಲ್ಲಾ, ತಾಲ್ಲೂಕು ಸಿಬ್ಬಂದಿಗಳು ಭಾಗವಹಿಸಿದ್ದರು.

## ಉಚಿತವಾಗಿ ಮಾಸ್ಕ್ ವಿತರಣೆ

ದಾವಣಗೆರೆ: ಭಾರತೀಯ ರೆಡ್ ಕ್ರಾಸ್ ಸಂಸ್ಥೆಯಿಂದ ಅಕ್ಟೋಬರ್ 31 ರಂದು ನಗರದ ಹೈಸ್ಕೂಲ್ ಮೈದಾನದಲ್ಲಿರುವ ಪಟಾಕಿ ವರ್ತಕರ ಮಳಿಗೆಗಳ ಮೂಲಕ ಸಾರ್ವಜನಿಕರ ಆರೋಗ್ಯದ ಹಿತದೃಷ್ಠಿಯಿಂದ ಒಂದು ಲಕ್ಷ ಮಾಸ್ಕ್ ಗಳನ್ನು ಉಚಿತವಾಗಿ ವಿತರಿಸಲಾಗುತ್ತಿದೆ. ಸಾರ್ವಜನಿಕರು ಪಟಾಕಿ ಖರೀದಿ ಸಮಯದಲ್ಲಿ ಪಟಾಕಿ ವರ್ತಕರ ಮಳಿಗೆಗಳಿಂದ ಮಾಸ್ಕ್‌ಗಳನ್ನು ಕೇಳಿ ಪಡೆಯಬಹುದು. ಹಾಗೂ ಸಾರ್ವಜನಿಕರಿಗೆ ಮಾಸ್ಕ್‌ಗಳ ಅವಶ್ಯಕತೆ ಇದ್ದಲ್ಲಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯಿಂದ ಕಚೇರಿ ಸಮಯದಲ್ಲಿ ಪ್ರತಿಯೊಬ್ಬರಿಗೆ ತಲಾ 2 ರಂತೆ ನೀಡಲಾಗುವುದೆಂದು ಪ್ರಧಾನ ಕಾರ್ಯದರ್ಶಿ ಆನಂದ್ ಜ್ಯೋತಿ ತಿಳಿಸಿದ್ದಾರೆ.

## ಬೆಂಬಲ ಬೆಲೆಯಲ್ಲಿ ಶೇಂಗಾ ಖರೀದಿ

» ದಾವಣಗೆರೆ

ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ 2024-25ನೇ ಸಾಲಿನಲ್ಲಿ ಎಫ್.ಎ.ಕ್ಯೂ ಗುಣಮಟ್ಟದ ಶೇಂಗಾ ಉತ್ಪನ್ನವನ್ನು ಖರೀದಿಸಲು ಜಿಲ್ಲೆಯಲ್ಲಿ ಖರೀದಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದ್ದಾರೆ. ಮಂಗಳವಾರ(29) ರಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಆಯೋಜಿಸಲಾಗಿದ್ದ ಟಾಸ್ಕ್ ಪೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ರೈತರಿಂದ ಶೇಂಗಾ ಉತ್ಪನ್ನವನ್ನು ಪ್ರತಿ ಎಕರೆಗೆ ಮೂರು ಕ್ವಿಂಟಾಲ್ ಹಾಗೂ ಪ್ರತಿ ರೈತರಿಂದ ಗರಿಷ್ಠ 15 ಕ್ವಿಂಟಾಲ್ ಎಫ್.ಎ.ಕ್ಯೂ ಗುಣಮಟ್ಟದ ಶೇಂಗಾವನ್ನು ಪ್ರತಿ ಕ್ವಿಂಟಾಲ್ ಗೆ ರೂ.6,783 ಗಳಂತೆ ಬೆಂಬಲ ಬೆಲೆಯಲ್ಲಿ ಖರೀದಿಸಲಾಗುವುದು. ಕೇಂದ್ರ ಸರ್ಕಾರದ ಬೆಂಬಲ ಬೆಲೆ ಅನುಸಾರ ನ್ಯಾಫೆಡ್ ಸಂಸ್ಥೆಯನ್ನು ಖರೀದಿ ಏಜೆನ್ಸಿಯಾಗಿ ಹಾಗೂ ಕರ್ನಾಟಕ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳಿ ನಿಯಮಿತ, ಬೆಂಗಳೂರು ಇವರನ್ನು ರಾಜ್ಯ ಮಟ್ಟದ ಖರೀದಿ ಏಜೆನ್ಸಿಯನ್ನಾಗಿ ನೇಮಿಸಲಾಗಿದೆ. ರೈತರ ನೋಂದಣಿ ಕಾಲಾವಧಿಯನ್ನು 45 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರೆಗೆ ನಿಗಧಿಪಡಿಸಲಾಗಿದೆ. ರೈತರು ಫ್ರೂಟ್ಸ್ ಐ.ಡಿಯೊಂದಿಗೆ ಕರ್ನಾಟಕ ಸಹಕಾರಿ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳ ನಿಯಮಿತ, ದಾವಣಗೆರೆ, ಸಹಕಾರಿ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳ ನಿಯಮಿತ, ಜಗಳೂರು ಈ ಸ್ಥಳಗಳಲ್ಲಿನ ಖರೀದಿ ಕೇಂದ್ರಗಳಲ್ಲಿ ನೊಂದಣಿ ಮಾಡಿಕೊಂಡು ಶೇಂಗಾ ಮಾರಾಟ ಮಾಡಬಹುದು.ಜಿಲ್ಲೆಯಲ್ಲಿ ಖರೀದಿಸಿದ ಶೇಂಗಾ ಹುಟ್ಟುವಳಿಯನ್ನು ದಾಸ್ತಾನು ಮಾಡಲು ಜಿಲ್ಲೆಯಲ್ಲಿರುವ ರಾಜ್ಯ ಹಾಗೂ ಕೇಂದ್ರ ಉಗ್ರಾಣಗಳಲ್ಲಿ ಸ್ಥಳ ಕಾಯ್ದಿರಿಸಲು ಸೂಚಿಸಲಾಯಿತು. ಶೇಂಗಾ ಮಾರಾಟ ಮಾಡಿದ ರೈತರಿಗೆ ಸರ್ಕಾರದ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಮಾರಾಟ ಮಾಡಿದ ರೈತರ ಹೆಸರಿನ ಅಧಾರ್ ಸಂಖ್ಯೆ ಜೋಡಣೆಗೊಂಡ ಬ್ಯಾಂಕ್ ಖಾತೆಗೆ ಜಮಾ ಆಗುವಂತೆ ಪಾವತಿ ಮಾಡಲು ಪ್ರತಿನಿತ್ಯ ಖರೀದಿಸುವ ಪ್ರಗತಿಯ ವಿವರವನ್ನು ಸರ್ಕಾರಕ್ಕೆ ಹಾಗೂ ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಗೆ ಇ-ಮೇಲ್ ಮೂಲಕ ಸಲ್ಲಿಸಲು ಸೂಚಿಸಲಾಯಿತು.

## ಪ್ರಮುಖ ಸುದ್ದಿ

### ತಾಲ್ಲೂಕು ಚಾಲನಾ ಸಮಿತಿ ಸಭೆಯಲ್ಲಿ ತಹಶೀಲ್ದಾರ್ ಡಾ.ನಾಗವೇಣಿ

# ಕುಷ್ಠರೋಗ ಮುಕ್ತ ತಾಲ್ಲೂಕು ನಿರ್ಮಾಣ ಗುರಿಯಾಗಲಿ

» ಚಿತ್ರದುರ್ಗ

ಎಲ್ಲಾ ಸಮನ್ವಯ ಇಲಾಖೆಗಳು ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸಿ, ಅಂಗನವಾಡಿ ಸಹಾಯಕಿಯರು, ಶಾಲಾ ಶಿಕ್ಷಕರು ತಮ್ಮ ತಮ್ಮ ವ್ಯಾಪ್ತಿಯಲ್ಲಿ ಹೆಚ್ಚು ಹೆಚ್ಚು ಪ್ರಚಾರ ಆಂದೋಲನ ನಡೆಸಿ ಸಾರ್ವಜನಿಕರಿಗೆ ಮಾಹಿತಿ ಒದಗಿಸಿ ಕುಷ್ಠರೋಗ ಮುಕ್ತ ತಾಲ್ಲೂಕು ನಿರ್ಮಾಣ ನಿಮ್ಮ ಗುರಿಯಾಗಲಿ ಎಂದು ತಹಶೀಲ್ದಾರ್ ಡಾ.ನಾಗವೇಣಿ ಹೇಳಿದರು.



ನಗರದ ತಹಶೀಲ್ದಾರ್ ಕಚೇರಿ ಸಭಾಂಗಣದಲ್ಲಿ ಬುಧವಾರ ಆರೋಗ್ಯ ಇಲಾಖೆಗೆ ಸಂಬಂಧಿಸಿದಂತೆ ತಾಲೂಕು ಚಾಲನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಾಲ್ಲೂಕು ಆರೋಗ್ಯ ಅಧಿಕಾರಿ ಡಾ. ಬಿ.ವಿ.ಗಿರೀಶ್ ಮಾತನಾಡಿ, 2024ರ ನವೆಂಬರ 04 ರಿಂ 21 ರವರೆಗೆ ತಾಲೂಕಿನ 265 ಹಳ್ಳಿಗಳಲ್ಲಿಯೂ ಕುಷ್ಟರೋಗ ಪ್ರಕರಣ ಪತ್ತೆ ಅಭಿಯಾನದ ಅಡಿಯಲ್ಲಿ ಮನೆ ಮನೆ ಸಮೀಕ್ಷೆ ಕುಷ್ಟರೋಗಗಳ ಲಕ್ಷಣಗಳ ಪತ್ತೆ ಹಚ್ಚುವಿಕೆ ಕಾರ್ಯ ಜರುಗಲಿದೆ ಸಮೀಕ್ಷೆಗೆ ಸಂಬಂಧಿಸಿದ ಎಲ್ಲಾ ಪೂರ್ವ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಆರೋಗ್ಯ ನಿರೀಕ್ಷಣಾಧಿಕಾರಿಗಳು ಆಶಾ ಕಾರ್ಯಕರ್ತೆಯರು ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳು ತಾಲೂಕಿನ ಎಲ್ಲಾ ಮನೆಗಳನ್ನು ಭೇಟಿ ನೀಡಿ ಚರ್ಮದ ಮೇಲಿನ ಕಲೆಗಳನ್ನು ಪತ್ತೆ ಹಚ್ಚಿ ಸಂಶಯಸ್ಪದ ಪ್ರಕರಣಗಳ ಪಟ್ಟಿಯನ್ನು ಮಾಡಿ ಸಂಬಂಧಿಸಿದ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಬಳಿ ಪ್ರಕರಣಗಳ ಮರು ತಪಾಸಣೆ ನಡೆಸಿ ಕುಷ್ಟರೋಗವೆಂದು ಖಚಿತಪಡಿಸಿದಲ್ಲಿ ಶೀಘ್ರವೇ ಬಹು ವಿಧ ಚಿಕಿತ್ಸೆ ಪ್ರಾರಂಭಿಸಲಾಗುತ್ತದೆ ಎಂದರು

ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಮಾಲೋಚಕರಾದ ಪ್ರಭುದೇವ ಮಾತನಾಡಿ ರಾಷ್ಟ್ರೀಯತ ತಂಬಾಕು ಕಾರ್ಯಕ್ರಮದ ಅಡಿಯಲ್ಲಿ ಯುವಜನ 2.0 ಕುರಿತು ಚರ್ಚಿಸಲಾಯಿತು, ಮುಖ್ಯವಾಗಿ, ಶಾಲಾ /ಕಾಲೇಜುಗಳಲ್ಲಿ ಜಾಗೃತಿ ಮತ್ತು ಪ್ರತಿಜ್ಞಾ ವಿಧಿ ಭೋದಿಸುವುದು, ತಂಬಾಕು ಕಾರ್ಯಾಚರಣೆ ಯನ್ನು ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿ ಸಮಿತಿಯನ್ನು ರಚನೆ ಮಾಡಿಕೊಂಡು ದಾಳಿ ನಡೆಸಲು ಚರ್ಚಿಸಲಾಯಿತು.

ಚಾಲನಾ ಸಮಿತಿ ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಮಂಜುಳಾ, ನಗರಸಭೆಯ ಆರೋಗ್ಯ ನಿರೀಕ್ಷಣಾಧಿಕಾರಿ ನಾಗರಾಜ್, ತಾಲೂಕ್ ಆರೋಗ್ಯ ಶಿಕ್ಷಣಾಧಿಕಾರಿ ಎನ್. ಎಸ್.ಮಂಜುನಾಥ್, ಆರ್‌ಬಿಎಸ್‌ಕೆ ಕಾರ್ಯಕ್ರಮದ ಡಾ. ಮಹೇಂದ್ರ ಕುಮಾರ್, ಡಾ.ಮಂಜುಳಾ ಡಾ. ಸುಪ್ರೀತಾ, ನರ್ಸಿಂಗ್ ಅಧಿಕಾರಿ ಪೂಜಾ ತಾಲೂಕು ವ್ಯವಸ್ಥಾಪಕ ಮೊಹಮ್ಮದ್ ಅಲಿ ತಾಲೂಕ್ ಲೆಕ್ಕಪತ್ರ ಪರಿಶೋಧಕ ಹಬೀಬ್. ಆರೋಗ್ಯ ನಿರೀಕ್ಷಣಾಧಿಕಾರಿ ಪ್ರವೀಣ್ ಮತ್ತಿತರರು ಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T